ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ



ವಿಧಾನಪರಿಷತ್ ಹಂಗಾಮಿ ಸಭಾಪತಿಯಾಗಿ ಕಾಂಗ್ರೆಸ್ ಸದಸ್ಯ ಪುಟ್ಟಣ್ಣ ಅವರನ್ನು ನೇಮಿಸಿ ರಾಜ್ಯಪಾಲ ಥಾವರಚಂದ್ ಗೆಹಲೋತ್ ಆದೇಶ ಹೊರಡಿಸಿದ್ದಾರೆ.

11 ಆಗಸ್ಟ್, 2026 ಮಂಗಳವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ -151 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ಶೀಘ್ರವಾಗಿ ವಿದ್ಯುತ್ ಸಮಸ್ಯೆ ಸುಧಾರಣೆ » 2

ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲೂ ವಾಡಿಕೆಗಿಂತ ಕಡಿಮೆ ಮಳೆಯಾಗಿದ್ದು, ಬೆಂಗಳೂರು ನಗರ ಜಿಲ್ಲೆಯಲ್ಲಿ ಶೇ.34ರಷ್ಟು ಕೊರತೆ ದಾಖಲಾಗಿದೆ. ಮಲೆನಾಡು ಜಿಲ್ಲೆಗಳಲ್ಲೂ ಮಳೆ ಅಭಾವ, ಪರಿಸ್ಥಿತಿ ಕಳವಳಕಾರಿಯಾಗಿದೆ.



ತಿಂಗಳಾಂತ್ಯಕ್ಕೆ ಕೇಂದ್ರಕ್ಕೆ ಬರ ಅಧ್ಯಯನ ವರದಿ » 4

# ರೈತರ ಹೊಟ್ಟೆ ಮೇಲೆ ಹೊಡೆಯುವ ಕೆಲಸ ಸಹಿಸಲ್ಲ

## ಹೋರಾಟದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ | ಸರ್ಕಾರಕ್ಕೆ ಹೆಚ್.ಡಿ.ದೇವೇಗೌಡರ ಎಚ್ಚರಿಕೆ

• ಪ್ರಜೋದಯ ವರದಿ

**ಹಾಸನ:** ಬಡವರು, ರೈತರು ಹಾಗು ಹಿಂದುಳಿದ ಸಮುದಾಯಗಳ ಜಮೀನು ಕಬಳಿಸಿ, ಬಡಾವಣೆ ನಿರ್ಮಿಸುವ ಯಾವುದೇ ಪ್ರಯತ್ನವನ್ನು ಸಹಿಸುವುದಿಲ್ಲ. ಬಡವರ ಪರವಾಗಿ ನಡೆಯುತ್ತಿರುವ ಹೋರಾಟದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲವೆಂದು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರು ಹೇಳಿದರು.

ಹೊಳೆನರಸೀಪುರ ತಾಲ್ಲೂಕಿನ ಹರದನಹಳ್ಳಿಯಲ್ಲಿ ಸೋಮವಾರ ಸಂಜೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಡದಿ ಟೌನ್‌ಶಿಪ್ ವಿರೋಧಿಸಿ ನಡೆದ ಪಾದಯಾತ್ರೆಯಲ್ಲಿ ನಾನು ಭಾಗವಹಿಸಿ ಮಾತನಾಡಿ ಬಂದಿದ್ದೇನೆ. ಮನೆಗೆ ಬಂದ ಬಳಿಕ ಪಾದಯಾತ್ರೆಯನ್ನು ತಡೆದಿರುವ ವಿಷಯ ತಿಳಿಯಿತು. ಈ ಘಟನೆಯನ್ನು ಮನೆಯಲ್ಲೇ ಕುಳಿತು ಗಮನಿಸಿದ್ದೇನೆ. ನನ್ನ 70 ವರ್ಷದ ರಾಜಕೀಯ ಜೀವನದಲ್ಲಿ ರೈತರ ಪರವಾಗಿ ನಡೆಸಿದ ಹಲವು ಹೋರಾಟಗಳ ನಿದರ್ಶನವಿದೆ. ದೇವೇಗೌಡ,



ಕುಮಾರಸ್ವಾಮಿ ಹಾಗು ನಿಖಿಲ್ ಕೇವಲ ಒಕ್ಕಲಿಗರಿಗಾಗಿ ಹೋರಾಟ ಮಾಡುತ್ತಿದ್ದಾರೆಂದು ಯಾರೂ ಭಾವಿಸಬಾರದು. ಹಲವು ಸಣ್ಣ ಸಮುದಾಯಗಳ ಜನರು, ಹಿಂದುಳಿದ ವರ್ಗದವರು ಹಾಗು ಸಂಕಷ್ಟದಲ್ಲಿರುವ ಬಡವರು ಈ ಹೋರಾಟದ ವ್ಯಾಪ್ತಿಯಲ್ಲಿದ್ದಾರೆ. ಅವರ ಹೊಟ್ಟೆಯ ಮೇಲೆ ಹೊಡೆಯುವ ಕೆಲಸ ಮಾಡಿದರೆ ಸುಮ್ಮನಿರುವುದಿಲ್ಲವೆಂದು ಎಚ್ಚರಿಸಿದರು.

### ಸರ್ಕಾರದಿಂದ ಹೇಯ ಕೃತ್ಯ

ಬಿಡದಿ ಟೌನ್‌ಶಿಪ್ ವಿರೋಧಿಸಿ ನಡೆಯುತ್ತಿರುವ ಪಾದಯಾತ್ರೆಯನ್ನು ತಡೆಯುವ ಮೂಲಕ ರಾಜ್ಯ ಸರ್ಕಾರ ಅತ್ಯಂತ ಹೇಯ ಕೃತ್ಯಕ್ಕೆ ಮುಂದಾಗಿದೆ. ಪೊಲೀಸ್ ಅಧಿಕಾರಿಗಳ ಬಗ್ಗೆ ನಾನು ಮಾತನಾಡುವುದಿಲ್ಲ. ಮುಖ್ಯಮಂತ್ರಿ, ಭಾನುವಾರ ಜಮೀನು ಪಡೆಯಲು ಯಾರಿಗೂ ಬಲವಂತ ಮಾಡುವುದಿಲ್ಲವೆಂದು ಹೇಳಿದ್ದಾರೆ. ಹಾಗಿದ್ದರೆ ಇಂದು ಪಾದಯಾತ್ರೆಯನ್ನು ಏಕೆ ತಡೆದರೆಂಬುದು ನಿಗೂಢ ಪ್ರಶ್ನೆಯಾಗಿದೆ ಎಂದು ದೇವೇಗೌಡರು ಆಕ್ರೋಶ ಹೊರಹಾಕಿದರು.

### ಸಿಎಂ ಆಗಿ ಒಂದೇ ತಿಂಗಳಿಗೆ ತರಾತುರಿ ಏಕೆ...

ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಿ ಆ ಸ್ಥಾನಕ್ಕೆ ನೀವು ಬಂದ ಕೇವಲ ಒಂದು ತಿಂಗಳಲ್ಲೇ ಈ ಯೋಜನೆಯನ್ನು ತರಾತುರಿಯಲ್ಲಿ ಜಾರಿಗೆ ತರಲು ಮುಂದಾಗಿರುವುದರ ಹಿಂದೆ ಕಾರಣವೇನು, ದೆಹಲಿಯ ಮುಖಂಡರಿಗೆ ನೀಡಿರುವ ಭರವಸೆಗಳನ್ನು ಈಡೇರಿಸಲು ಈ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆಯೇ ಎಂಬ ಅನುಮಾನ ಮೂಡುತ್ತಿದೆ ಎಂದು ಆರೋಪಿಸಿದ ಅವರು, ಈ ಜಮೀನನ್ನು ಕಬಳಿಸಿ ದೆಹಲಿಯಲ್ಲಿರುವ ಯಾರಿಗಾಗಿ ಬಡಾವಣೆ ನಿರ್ಮಿಸಲು ಮುಂದಾಗಿದ್ದೀರಿ ಎಂದು ದೇವೇಗೌಡ ಅವರು ಪ್ರಶ್ನಿಸಿದರು.

**ಸಮಾಲೋಚನೆ ನಡೆಸಿ ಮುಂದಿನ ಹೋರಾಟ**

ಮಂಗಳವಾರ ಬೆಂಗಳೂರಿಗೆ ತೆರಳಿ ಅಲ್ಲಿ ನಡೆದಿರುವ ಘಟನೆ ಕುರಿತು ಮಾಹಿತಿ ಪಡೆಯುತ್ತೇನೆ. ಮುಖಂಡರೊಂದಿಗೆ ಸಮಾಲೋಚನೆ ನಡೆಸಿ ಮುಂದಿನ ಹೋರಾಟದ ರೂಪುರೇಷೆ ಸಿದ್ಧಪಡಿಸಲಾಗುವುದು. ಆ.18 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಹೋರಾಟ ನಡೆಸಲು ಉದ್ದೇಶಿಸಲಾಗಿದೆ. ಈ ಹೋರಾಟಕ್ಕೆ ಯಾವುದೇ ರೀತಿಯ ಆತಂಕ ಎದುರಾದರೂ ಸುಮ್ಮನಿರುವುದಿಲ್ಲ. ಹೋರಾಟದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲವೆಂದು ಸ್ಪಷ್ಟಪಡಿಸಿದರು.

ಈ ಯೋಜನೆಗೆ ಯಾರು ಅರ್ಜಿ ಸಲ್ಲಿಸಿದ್ದಾರೆ, ಯಾವ ಉದ್ದೇಶಕ್ಕಾಗಿ ಯೋಜನೆ ರೂಪಿಸಲಾಗಿದೆ, ಯಾರಿಗಾಗಿ ನಿವೇಶನ ನಿರ್ಮಿಸುತ್ತೀರಿ, ಯಾರಿಗಾಗಿ ಬಡಾವಣೆ ಮಾಡುತ್ತೀರಿ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು. ಟೊಯೊಟಾ ಕಂಪನಿಗೆ ಮೂರು ಸಾವಿರ ಎಕರೆ ಭೂಮಿ ನೀಡಿದ್ದೇನೆ. ಅಲ್ಲಿ ಕೈಗಾರಿಕಾ ಯೋಜನೆಗಾಗಿ ಭೂಮಿ ನೀಡಲಾಗಿತ್ತು. ಈಗ ಇಲ್ಲಿ ಯಾವ ಯೋಜನೆ ಮಾಡಲು ಮುಂದಾಗಿದ್ದಾರೆ ಎಂಬುದನ್ನು ಸರ್ಕಾರ ತಿಳಿಸಬೇಕೆಂದು ಒತ್ತಾಯಿಸಿದರು.

ಕಡು ಬಡತನದಲ್ಲಿರುವ ಹಾಗು ಕೃಷಿಯನ್ನೇ ನಂಬಿ ಜೀವನ ನಡೆಸುತ್ತಿರುವ ಜನರ ಸಂಖ್ಯೆ ಹೆಚ್ಚಿನದಾಗಿದೆ. ಅವರ ಮುಂದಿನ ಜೀವನಕ್ಕೆ ತೊಂದರೆ ಉಂಟು ಮಾಡುವಂತಹ ಕೃತ್ಯಕ್ಕೆ ಸರ್ಕಾರ ಮುಂದಾಗಿದೆ. ಬೆಂಗಳೂರಿನ ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಸುಮಾರು 35 ರಿಂದ 40 ಸಾವಿರ ಖಾಲಿ ನಿವೇಶನಗಳಿವೆ. ಹೀಗಿರುವಾಗ ಕೃಷಿಯನ್ನೇ ನಂಬಿ ಜೀವನ ನಡೆಸುತ್ತಿರುವ ರೈತರ ಜಮೀನನ್ನು ಪಡೆದುಕೊಳ್ಳುವ ಅಗತ್ಯವೇನು. ರೈತರು ಹಾಗು ಬಡವರ ಹಿತಾಸಕ್ತಿಗೆ ಧಕ್ಕೆ ತರುವ ಯಾವುದೇ ಕ್ರಮವನ್ನು ಒಪ್ಪಿಕೊಳ್ಳುವುದಿಲ್ಲವೆಂದು ಗುಡುಗಿದರು.

ಬೆಂಗಳೂರನ್ನು ಐದು ಮಹಾ ನಗರ ಪಾಲಿಕೆಗಳಾಗಿ ವಿಭಜಿಸಿದ್ದು ನೀವೇ. ಆಗ ಏಕೆ ಭೂಮಿ ನೀಡಲಿಲ್ಲ, ಈಗ ಕೇವಲ ಒಂದು ತಿಂಗಳಲ್ಲಿ ಈ ಯೋಜನೆಗೆ ಏಕೆ ಇಷ್ಟು ತುರ್ತು, ಸರ್ಕಾರದ ಉದ್ದೇಶವನ್ನು ಜನರಿಗೆ ಸ್ಪಷ್ಟಪಡಿಸಬೇಕೆಂದು ಒತ್ತಾಯಿಸಿದ್ದಾರೆ.



ಹೊಳೆನರಸೀಪುರ ತಾಲ್ಲೂಕಿನ ಹರದನಹಳ್ಳಿಯಲ್ಲಿರುವ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರ ನಿವಾಸಕ್ಕೆ ಶ್ರವಣಬೆಳಗೊಳ ಜೈನಮಠದ ಸ್ವಸ್ತಿಶ್ರೀ ಆಗಮ ಕೀರ್ತಿ ಭಟ್ಟಾರಕ ಸ್ವಾಮೀಜಿ ಅವರು ಭೇಟಿ ನೀಡಿ ಸಮಾಲೋಚನೆ ನಡೆಸಿದರು.

## ಕಾವೇರಿ: ಇಂದು ತಮಿಳುನಾಡು ಅರ್ಜಿ ವಿಚಾರಣೆ

• ಪ್ರಜೋದಯ ವರದಿ

**ನವದೆಹಲಿ:** ಕಾವೇರಿ ನೀರಿನ ಪಾಲನ್ನು ತಕ್ಷಣ ಬಿಡುಗಡೆ ಮಾಡುವಂತೆ ಕರ್ನಾಟಕ ಸರ್ಕಾರಕ್ಕೆ ನಿರ್ದೇಶನ ನೀಡಬೇಕೆಂದು ಕೋರಿ ತಮಿಳುನಾಡು ಸರ್ಕಾರ ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ಆ.13 ರಂದು ನಡೆಸಲು ಸುಪ್ರೀಂ ಕೋರ್ಟ್ ಸೋಮವಾರ ಒಪ್ಪಿಗೆ ನೀಡಿದೆ. ಕಾವೇರಿ ನೀರು ನಿಯಂತ್ರಣ ಸಮಿತಿಯ ಸಭೆ ನವದೆಹಲಿಯಲ್ಲಿ ಮಂಗಳವಾರ ಬೆಳಿಗ್ಗೆ ನಡೆಯಲಿದ್ದು, ಜಲಾಶಯಗಳ ನೀರಿನ ಸ್ಥಿತಿ ಬಗ್ಗೆ ಸಮಿತಿಯು ಪರಾಮರ್ಶೆ ನಡೆಸಲಿದೆ.

# ನಿಮ್ಮ ನಂಬಿಕೆಗೆ ಚ್ಯುತಿ ಬಾರದಂತೆ ಕೆಲಸ ಮಾಡುವೆ

## ಅಭಿಮಾನಿಗಳ ಸಮ್ಮುಖದಲ್ಲಿ ಶಿವಲಿಂಗೇಗೌಡರ ಶಪಥ | ನೂತನ ಸಚಿವರಿಗೆ ಭವ್ಯ ಸ್ವಾಗತ

• ಪ್ರಜೋದಯ ವರದಿ

**ಅರಸೀಕೆರೆ:** ಕ್ಷೇತ್ರದ ಜನರು ಹಾಗು ನಮ್ಮ ನಾಯಕರು ಇಟ್ಟಿರುವ ವಿಶ್ವಾಸಕ್ಕೆ ಚ್ಯುತಿ ಬಾರದಂತೆ ಕೆಲಸ ಮಾಡುತ್ತೇನೆಂದು ನೂತನ ಸಚಿವ ಕೆ.ಎಂ.ಶಿವಲಿಂಗೇಗೌಡ ಅವರು ಶಪಥ ಮಾಡಿದರು.

ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ಬಳಿಕ ಮೊದಲ ಬಾರಿಗೆ ಸೋಮವಾರ ನಗರಕ್ಕೆ ಆಗಮಿಸಿದ ಅವರು ಪಿಪಿ ವೃತ್ತದಲ್ಲಿ ಸಾವಿರಾರು ಅಭಿಮಾನಿಗಳು, ಕಾಂಗ್ರೆಸ್ ಮುಖಂಡರನ್ನು ಉದ್ದೇಶಿಸಿ ಮಾತನಾಡಿದರು.

ಕ್ಷೇತ್ರದ ಅಭಿವೃದ್ಧಿ ಜೊತೆಗೆ ಇಲಾಖೆ ವ್ಯಾಪ್ತಿಯಲ್ಲಿ ಮಾಡಬಹುದಾದ ಕೆಲಸವನ್ನು ನಿಷ್ಪಕ್ಷಪಾತವಾಗಿ ಜಿಲ್ಲೆ ಹಾಗು ರಾಜ್ಯದ ಅಭಿವೃದ್ಧಿಗೆ ಶ್ರಮಿಸುತ್ತೇನೆ. ಇವತ್ತು ನಾನು ಏನಾಗಿದ್ದೇನೋ ಅದು ಕ್ಷೇತ್ರದ ಜನರು ಕೊಟ್ಟ ಭಿಕ್ಷೆಯಾಗಿದೆ, ನಿಮ್ಮೆಲ್ಲರ ಆಶೀರ್ವಾದ, ನಿರಂತರ ಬೆಂಬಲದಿಂದಾಗಿ ಸಚಿವ ಸ್ಥಾನ ಸಿಕ್ಕಿದೆ. ಸಚಿವ ಸಂಪುಟದಲ್ಲಿ ಅವಕಾಶ ಎಂಬುದು ಅರಸೀಕೆರೆ ಕ್ಷೇತ್ರಕ್ಕೆ ಮರೀಚಿಕೆಯಾಗಿತ್ತು. ಆದರೆ ಈಗ ಆ ಅಪವಾದ ದೂರಾಗಿದೆ ಎಂದರು.

ನಾನು ಮಂತ್ರಿಯಾಗಲು ಆಸೆಪಟ್ಟ ಕ್ಷೇತ್ರದ ಜನರ, ನನಗೆ ಅವಕಾಶ ಕಲ್ಪಿಸಿದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿ ರಾಜ್ಯದ ಎಲ್ಲಾ ನಾಯಕರು ಹಾಗು ಹೈಕಮಾಂಡ್‌ಗೆ ಆಭಾರಿಯಾಗಿದ್ದೇನೆಂದರು.

ನಗರಸಭೆ ಮಾಜಿ ಅಧ್ಯಕ್ಷ ಸಮೀವುಲ್ಲಾ ಅವರು ಮಾತನಾಡಿ, ಶಿವಲಿಂಗೇಗೌಡರ ಹೆಸರು ಕ್ಷೇತ್ರದಲ್ಲಿ ಅಜರಾಮರವಾಗಿದೆ. ಅವರು ಶಾಸಕರಾಗಿ ಹೇಗೆ ಕ್ಷೇತ್ರದ ಜನರ ವಿಶ್ವಾಸ ಗಳಿಸಿದ್ದಾರೋ, ಅದೇ ರೀತಿ ಸಚಿವರಾಗಿಯೂ ಉತ್ತಮ ಕೆಲಸ ಮಾಡುವ ಮೂಲಕ ಕಾಂಗ್ರೆಸ್ ಪಕ್ಷ ಹಾಗು ನಾಡಿನ ಜನರ ವಿಶ್ವಾಸ ಗಳಿಸುವುದರಲ್ಲಿ ಸಂದೇಹವಿಲ್ಲ ಎಂದರು.

ನಗರ ಯೋಜನಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅರುಣ್ ಕುಮಾರ್ ಅವರು ಮಾತನಾಡಿ, ಸಾಮಾನ್ಯ ರೈತ ಕುಟುಂಬದಲ್ಲಿ ಜನಿಸಿದ ಶಿವಲಿಂಗೇಗೌಡರು ತಮ್ಮ ಬದ್ಧತೆ, ಜನಪರ ಕಾಳಜಿ ಮೂಲಕ ರಾಜ್ಯದ ಧೀಮಂತ ನಾಯಕರಾಗಿ ಹೊರಹೊಮ್ಮಿದ್ದಾರೆ. ಅವರಿಂದ ಕ್ಷೇತ್ರದ ಬೆಳವಣಿಗೆ ಮತ್ತಷ್ಟು ಆಗುವುದರಲ್ಲಿ ಸಂದೇಹವಿಲ್ಲವೆಂದರು.

ಕಾಂಗ್ರೆಸ್ ಜಿಲ್ಲಾ ಕಾರ್ಯಾಧ್ಯಕ್ಷ ಜಿ.ಬಿ.ಶಶಿಧರ್, ಮುಖಂಡರಾದ ಗಂಜಿಗೆರೆ ಚಂದ್ರಶೇಖರ್, ಅರಸೀಕೆರೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀನಿವಾಸ್, ಗಂಡಸಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೆಟ್ರೋ ಬಾಬು, ಬಿಳಿ ಚೌಡಯ್ಯ, ಗೊಲ್ಲರಹಳ್ಳಿ ಹನುಮಪ್ಪ ಮೊದಲಾದವರಿದ್ದರು.



### ಅಭಿಮಾನಿಗಳ ಪ್ರೀತಿಗೆ ಶರಣಾದ ಶಿವಲಿಂಗೇಗೌಡ

ಬೆಂಗಳೂರಿನಿಂದ ತಿಪಟೂರು ಮಾರ್ಗವಾಗಿ ನಗರ ಪ್ರವೇಶಿಸಿದ ಸಚಿವ ಕೆ.ಎಂ.ಶಿವಲಿಂಗೇಗೌಡ ಅವರಿಗೆ ದಾರಿಯುದ್ದಕ್ಕೂ ಅದ್ದೂರಿ ಸ್ವಾಗತ ದೊರೆಯಿತು. ಕಾಂಗ್ರೆಸ್ ಮು ಖಂಡರು, ಕಾರ್ಯಕರ್ತರು ಹಾಗು ಅಪಾರ ಅಭಿಮಾನಿಗಳು ಭವ್ಯ ಸ್ವಾಗತ ಕೋರಿದರು. ತೆರೆದ ವಾಹನದಲ್ಲಿ ತಮ್ಮ ನೆಚ್ಚಿನ ನಾಯಕನನ್ನು ಮೆರವಣಿಗೆಯಲ್ಲಿ ಕರೆದೊಯ್ದರು. ಮಾರ್ಗದುದ್ದಕ್ಕೂ ಸಾಗಿದ ಜನರ ಪ್ರೀತಿಗೆ ಮನಸೋತ ಶಿವಲಿಂಗೇಗೌಡ ಅವರು ಕೈಮುಗಿದು ಶರಣೆಂದರು. ಹಾಸನ ರಸ್ತೆ ಮಾರ್ಗವಾಗಿ ಅಂಬೇಡ್ಕರ್ ವೃತ್ತ, ನಂತರ ಪಿಪಿ ವೃತ್ತದ ವರೆಗೂ ಬೃಹತ್ ಮೆರವಣಿಗೆ ಸಾಗಿತು.

ಬೃಹದಾಕಾರದ ಸೇಬಿನ ಹಾರ, ವಿವಿಧ ಪುಷ್ಪಗಳಿಂದ ತಯಾರಿಸಿದ್ದ ಹಾರಗಳನ್ನು ನಾಯಕನ ಕೊರಳಿಗೆ ಹಾಕುವ ಮೂಲಕ ಕಾರ್ಯಕರ್ತರು, ಅಭಿಮಾನಿಗಳು ಸಂಭ್ರಮ ವ್ಯಕ್ತಪಡಿಸಿದರು. ಮೆರವಣಿಗೆ ಸಾಗುವ ಮಾರ್ಗದುದ್ದಕ್ಕೂ ಕಟ್ಟಲಾಗಿದ್ದ ತಳಿರು, ತೋರಣ ಹಾಗು ಫ್ಲೆಕ್ಸ್‌ಗಳು ಶಿವಲಿಂಗೇಗೌಡರಿಗೆ ಅಭೂತಪೂರ್ವ ಸ್ವಾಗತ ಕೋರಿದವು.

ಹಾಸನ ವೃತ್ತದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ, ಪಿಪಿ ವೃತ್ತದಲ್ಲಿರುವ ಬಸವೇಶ್ವರರ ಪ್ರತಿಮೆ ಹಾಗು ಬಸ್ ನಿಲ್ದಾಣ ಸಮೀಪದ ಸಂಗೊಳ್ಳಿ ರಾಯಣ್ಣ ಪ್ರತಿಮೆಗೆ ಸಚಿವ ಶಿವಲಿಂಗೇಗೌಡ ಅವರು ಮಾಲಾರ್ಪಣೆ ಮಾಡಿದರು.

# ಅರಣ್ಯ ಭೂಮಿ ಅಕ್ರಮ ಹಂಚಿಕೆ ಗುರುತಿಸಲು ವಿಫಲ

## ಜಿಲ್ಲಾ ಮಟ್ಟದ ಎಸ್‌ಐಟಿ ವಿರುದ್ಧ ಬಿ.ಶಿವರಾಮ್ ಅಸಮಾಧಾನ

• ಪ್ರಜೋದಯ ವರದಿ

**ಹಾಸನ:** ಮೀಸಲು ಅರಣ್ಯ ಪ್ರದೇಶವನ್ನು ಅಕ್ರಮವಾಗಿ ಹಂಚಿಕೆ ಮಾಡಿರುವುದನ್ನು ಪತ್ತೆ ಹಚ್ಚಲು ಸುಪ್ರೀಂ ಕೋರ್ಟ್ ನಿರ್ದೇಶನದ ಮೇರೆಗೆ ರಚನೆಯಾಗಿರುವ ಎಸ್‌ಐಟಿ ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿಲ್ಲವೆಂದು ಮಾಜಿ ಸಚಿವ ಬಿ.ಶಿವರಾಮ್ ಅವರು ಆರೋಪಿಸಿದರು.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2025ರ ಸೆಪ್ಟೆಂಬರ್‌ನಲ್ಲಿ ರಾಜ್ಯ ಸರ್ಕಾರ ತನಿಖೆಗಾಗಿ ರಾಜ್ಯ ಹಾಗು ಜಿಲ್ಲಾ ಮಟ್ಟದಲ್ಲಿ ಎಸ್‌ಐಟಿ ರಚಿಸಿದೆ. ಜಿಲ್ಲಾ ಮಟ್ಟದ ಸಮಿತಿಗೆ ಜಿಲ್ಲಾಧಿಕಾರಿ ಅಧ್ಯಕ್ಷರಾಗಿದ್ದು, ಅರಣ್ಯ ಸಂರಕ್ಷಣಾಧಿಕಾರಿ ಹಾಗು ಭೂದಾಖಲೆಗಳ ಉಪ ನಿರ್ದೇಶಕರು ಸದಸ್ಯರಾಗಿದ್ದಾರೆ. ಸಮಿತಿಯು ನಿಗದಿತ ಕಾಲ



ಮಿತಿಯಲ್ಲಿ ಅರಣ್ಯ ಭೂಮಿ ಒತ್ತುವರಿ ಹಾಗು ಅಕ್ರಮ ಹಂಚಿಕೆಗಳನ್ನು ಗುರುತಿಸಿ, ತೆರವುಗೊಳಿಸಿ ಸರ್ಕಾರಕ್ಕೆ ವರದಿ ಸಲ್ಲಿಸಬೇಕಿದೆ. ಆದರೆ, ಆ ಕೆಲಸವಾಗಿಲ್ಲವೆಂದು ದೂರಿದರು.

ಕಳೆದ ಒಂದು ವರ್ಷದಲ್ಲಿ ಅರಣ್ಯ ಭೂಮಿ ಪರಿಶೀಲನೆಗೆ ಸಂಬಂಧಿಸಿದಂತೆ ಕೇವಲ ಎರಡು ಸಭೆಗಳು ನಡೆದಿರುವುದು ಕಾರ್ಯವೈಖರಿಯ ನಿಧಾನಗತಿಗೆ ಸಾಕ್ಷಿಯಾಗಿದೆ. ಇಂತಹ ಪರಿಸ್ಥಿತಿಯಲ್ಲಿ ನಿಗದಿತ ಅವಧಿಯಲ್ಲಿ ಸಮಗ್ರ ಪರಿಶೀಲನೆ ಪೂರ್ಣಗೊಳಿಸಿ ಅರಣ್ಯ ಭೂಮಿಯನ್ನು ವಾಪಾಸ್ ಪಡೆಯುವುದು ಹೇಗೆ ಸಾಧ್ಯವೆಂದು ಪ್ರಶ್ನಿಸಿದರು.

ಮೀಸಲು ಅರಣ್ಯ ಭೂಮಿಯನ್ನು ಬೇರೆ ಉದ್ದೇಶಗಳಿಗೆ ಹಂಚಿಕೆ ಮಾಡಿರುವುದು ಕಂಡು ಬಂದರೆ ಅದರ ಕಾನೂನು ಬದ್ಧತೆಯನ್ನು ಪರಿಶೀಲಿಸಬೇಕು. ಖಾಸಗಿ ವ್ಯಕ್ತಿಗಳು ಅಕ್ರಮವಾಗಿ ಭೂಮಿ ವಶಪಡಿಸಿಕೊಂಡಿದ್ದರೆ ಅದನ್ನು ಸರ್ಕಾರ ಮರಳಿ ಪಡೆದು ಅರಣ್ಯ ಇಲಾಖೆಗೆ ಹಸ್ತಾಂತರಿಸಬೇಕು. ಸಾರ್ವಜನಿಕ ಹಿತಾಸಕ್ತಿಯ ಕಾರಣದಿಂದ ಭೂಮಿಯನ್ನು ಮರಳಿ ಪಡೆಯಲು ಸಾಧ್ಯವಾಗದ ಸಂದರ್ಭಗಳಲ್ಲಿ ಮಾರುಕಟ್ಟೆ ಮೌಲ್ಯವನ್ನು ವಸೂಲಿ ಮಾಡುವ ಕ್ರಮ ಕೈಗೊಳ್ಳಬೇಕೆಂಬ ನಿರ್ದೇಶನವಿದೆ. ಆದರೆ, ಜಿಲ್ಲೆಯಲ್ಲಿ ಈ ಪ್ರಕ್ರಿಯೆ ನಿರೀಕ್ಷಿತ ಮಟ್ಟದಲ್ಲಿ ನಡೆಯುತ್ತಿಲ್ಲವೆಂದು ಹೇಳಿದರು.

ಕಚೇರಿಗಳಲ್ಲೇ ಕುಳಿತು ಭೂಮಿಯ ಪಟ್ಟಿಗಳನ್ನು ಸಿದ್ಧಪಡಿಸಲಾಗುತ್ತಿದೆ ಎಂಬ ಆರೋಪಗಳಿದ್ದು, ಇದರಿಂದ ನೈಜ ಸ್ಥಿತಿ ಹೊರ ಬರಲು ಸಾಧ್ಯವಿಲ್ಲ. ಅಧಿಕಾರಿಗಳು ಜನರ ಅಹವಾಲುಗಳನ್ನು ಪರಿಗಣಿಸಿ ಸ್ಥಳ ಪರಿಶೀಲನೆ ನಡೆಸಬೇಕು. ಸುಪ್ರೀಂಕೋರ್ಟ್ ಹಾಗು ಸರ್ಕಾರದ ನಿರ್ದೇಶನಗಳನ್ನು

» ನಾಲ್ಕನೇ ಪುಟದಲ್ಲಿ

### ಜಿಲ್ಲೆಯಲ್ಲಿ 37 ಸಾವಿರ ಎಕರೆ ಸಮಸ್ಯೆ

ಜಿಲ್ಲೆಯಲ್ಲಿ ಸುಮಾರು 37 ಸಾವಿರ ಎಕರೆ ಅರಣ್ಯ ಭೂಮಿಗೆ ಸಂಬಂಧಿಸಿದ ಸಮಸ್ಯೆಗಳಿವೆ. ಸುಮಾರು 20 ಗ್ರಾಮಗಳಲ್ಲಿ ಸಾವಿರಾರು ಹೆಕ್ಟೇರ್ ಪ್ರದೇಶ ಸೆಕ್ಷನ್ 4ರ ಅಡಿಯಲ್ಲಿ ಅರಣ್ಯ ಪ್ರದೇಶವೆಂದು ಘೋಷಣೆಯಾಗಿದೆ. ಈ ಪ್ರದೇಶಗಳಲ್ಲಿ ಹಲವು ವರ್ಷಗಳಿಂದ ರೈತರು ಭೂಮಿಯನ್ನು ಬಳಸಿಕೊಂಡು ಜೀವನ ನಡೆಸುತ್ತಿದ್ದಾರೆ. ಹೀಗಾಗಿ ಕೇವಲ ಕಂದಾಯ ಅಥವಾ ಅರಣ್ಯ ದಾಖಲೆಗಳ ಆಧಾರದ ಮೇಲೆ ತೀರ್ಮಾನ ಕೈಗೊಳ್ಳದೆ, ಸ್ಥಳದಲ್ಲಿನ ವಾಸ್ತವ ಪರಿಸ್ಥಿತಿಯನ್ನು ಪರಿಗಣಿಸಬೇಕೆಂದು ಬಿ.ಶಿವರಾಮ್ ಅವರು ಒತ್ತಾಯಿಸಿದರು.

## ಬೇಲೂರು ಭಾಗದಲ್ಲಿ ಧಾರಾಕಾರ ಮಳೆ



• ಪ್ರಜೋದಯ ವರದಿ

**ಹಾಸನ:** ಬೇಲೂರು ತಾಲ್ಲೂಕಿನ ವಿವಿಧೆಡೆ ಸೋಮವಾರ ಜೋರು ಮಳೆ ಸುರಿದಿದ್ದು, ಹಾಸನ, ಚನ್ನರಾಯಪಟ್ಟಣ ಭಾಗದಲ್ಲಿ ಕೆಲಹೊತ್ತು ವರುಣ ಕೃಪೆ ತೋರಿದ್ದಾನೆ.

ಬಿಕ್ಕೋಡು, ಕೆಸಗೋಡು, ಮಲಸಾವರ, ಅರೇಹಳ್ಳಿ ವ್ಯಾಪ್ತಿಯಲ್ಲಿ ಬೆಳಿಗ್ಗೆಯಿಂದಲೇ ವರುಣಾರ್ಭಟ ಜೋರಾಗಿತ್ತು. ನಿರಂತರ ಮಳೆಯಿಂದ ವಾಹನ ಸವಾರರು, ಕೂಲಿ ಕಾರ್ಮಿಕರು ಪರದಾಡಿದರು. ಧಾರಾಕಾರ ಮಳೆಯಿಂದಾಗಿ ಬೈಕ್ ಸವಾರರು ಆಶ್ರಯಕ್ಕಾಗಿ ರಸ್ತೆ ಪಕ್ಕದ ಬಸ್ ತಂಗುದಾಣಗಳ ಮೊರೆ ಹೊಕ್ಕರು. ಕೆಎಸ್‌ಆರ್‌ಟಿಸಿ ಬಸ್ ಹಾಗು ಕಾರು ಚಾಲಕರು ರಸ್ತೆ ಕಾಣದೆ ನಿಧಾನಕ್ಕೆ ಚಲಿಸುವಂತಹ ಪರಿಸ್ಥಿತಿ ನಿರ್ಮಾಣವಾಗಿತ್ತು. ಕೆಸಗೋಡು ಗ್ರಾಮದಲ್ಲಿ ರಸ್ತೆ ಕಾಮಗಾರಿ ಕೈಗೊಂಡಿರುವುದರಿಂದ ರಸ್ತೆ ಪೂರ್ತಿ ನೀರು ನಿಂತು ಭಾರೀ ತೊಂದರೆಯಾಯಿತು. ಆಲೂರು, ಪಾಳ್ಯ ಭಾಗದಲ್ಲಿ ಸ್ವಲ್ಪ ಮಳೆ ಸುರಿಯಿತು.ಮಲೆನಾಡು ಭಾಗದಲ್ಲಿ ಮೋಡ ಮುಸುಕಿ ಮಳೆಯ ಮುನ್ಸೂಚನೆ ಇತ್ತಾದರೂ ಮಳೆ ಸುರಿಯಲಿಲ್ಲ, ನಗರದಲ್ಲೂ ಮಧ್ಯಾಹ್ನ ಸಾಧಾರಣ ಮಳೆಯಾಗಿದೆ.

# ವಿದೇಶಿ ತಳಿಗಳ ಕಾಫಿ ಸಸಿ ಖರೀದಿಸದಿರಿ

## ▪ ಬೆಳೆಗಾರರಿಗೆ ಕಾಫಿ ಮಂಡಳಿ ಎಚ್ಚರಿಕೆ

• ಪ್ರಜೋದಯ ವರದಿ

**ಬೆಂಗಳೂರು:** ವಿದೇಶಿ ತಳಿಗಳ ಕಾಫಿ ಸಸಿಗಳನ್ನು ರಾಜ್ಯದಲ್ಲಿ ಮಾರಾಟ ಮಾಡುತ್ತಿರುವ ಬಗ್ಗೆ ಬೆಳೆಗಾರರು ಎಚ್ಚರಿಕೆ ವಹಿಸಬೇಕು. ಖಾಸಗಿ ನರ್ಸರಿಗಳು ಮತ್ತು ವ್ಯಕ್ತಿಗಳಿಂದ ವಿದೇಶಿ ಮೂಲದ ಕಾಫಿ ಸಸಿಗಳನ್ನು ಖರೀದಿಸಬಾರದೆಂದು ಕಾಫಿ ಮಂಡಳಿಯು ಎಚ್ಚರಿಕೆ ನೀಡಿದೆ.

ವಿಯೆಟ್ನಾಂನ ಟಿಎಸ್5, ಟಿಆರ್9 ಮತ್ತು ಟಿಆರ್11 ತಳಿಗಳು ಹಾಗು ಕೆಲವು ಬ್ರೆಜಿಲಿಯನ್ ಕಾಫಿ ತಳಿಗಳಂತಹ ವಿದೇಶಿ ಮೂಲದ ಸಸಿಗಳನ್ನು ಕೆಲವು ಖಾಸಗಿ ನರ್ಸರಿಗಳು ಮತ್ತು ವ್ಯಕ್ತಿಗಳು ಮಾರಾಟ ಮಾಡುತ್ತಿರುವುದು ಮಂಡಳಿಯ ಗಮನಕ್ಕೆ ಬಂದಿದೆ. ಸಾಮಾಜಿಕ ಜಾಲತಾಣಗಳಲ್ಲಿ ಆಕರ್ಷಕ ಜಾಹೀರಾತುಗಳ ಮೂಲಕ ಈ ಸಸಿಗಳನ್ನು ವ್ಯಾಪಕವಾಗಿ ಪ್ರಚಾರ ಮಾಡಲಾಗುತ್ತಿದೆ.

ಇಂತಹ ಅನಧಿಕೃತ ಆಮದುಗಳು ಭಾರತದ ಕಾಫಿ ಉದ್ಯಮಕ್ಕೆ ಗಂಭೀರ ಅಪಾಯವನ್ನು ಉಂಟು ಮಾಡಬಹುದೆಂದು ಕೇಂದ್ರ ಕಾಫಿ ಸಂಶೋಧನಾ ಸಂಸ್ಥೆಯ ಚಿಕ್ಕಮಗಳೂರು ಕೇಂದ್ರದ ಸಂಶೋಧನಾ ನಿರ್ದೇಶಕ ಡಾ. ಎಂ. ಸೆಂಥಿಲ್ ಕುಮಾರ್ ಅವರು ಬೆಳೆಗಾರರಿಗೆ ಸೂಚಿಸಿದ್ದಾರೆ.

ವಿದೇಶಿ ಕಾಫಿ ತಳಿಗಳು ತೋಟಗಳ ಆರೋಗ್ಯಕ್ಕೆ ಅಪಾಯವನ್ನುಂಟು ಮಾಡಬಹುದು. ಈ ವಿದೇಶಿ ತಳಿಗಳ ಗುಣಮಟ್ಟ ಮತ್ತು ಕಾರ್ಯಕ್ಷಮತೆಯ ಬಗ್ಗೆ ಕಾಫಿ ಮಂಡಳಿಗೆ ಯಾವುದೇ ಮಾಹಿತಿ ಇಲ್ಲ. ನಿಗದಿತ ಆಮದು ಪರವಾನಗಿಗಳನ್ನು ಪಡೆಯದೆ ಮತ್ತು



ಸಸ್ಯ ತಪಾಸಣೆ ಹಾಗು ನಿಯಂತ್ರಣ ನಿಯಮಗಳನ್ನು ಪಾಲಿಸದೆ ಇಂತಹ ಸಸಿಗಳನ್ನು ಭಾರತಕ್ಕೆ ತರುವುದರಿಂದ, ದೇಶದಲ್ಲಿ ಪ್ರಸ್ತುತ ಇಲ್ಲದ ಅಪಾಯಕಾರಿ ಕೀಟಗಳು, ರೋಗಗಳು ಮತ್ತು ಹಾನಿಕಾರಕ ಕಳೆಗಳು ಪ್ರವೇಶಿಸಲು

» ನಾಲ್ಕನೇ ಪುಟದಲ್ಲಿ

## ಸಿಲಿಂಡರ್ ಸ್ಫೋಟ : ತಾಯಿ-ಮಗಳಿಗೆ ಗಂಭೀರ ಗಾಯ



• ಪ್ರಜೋದಯ ವರದಿ

**ಹಾಸನ:** ಅಡುಗೆ ಮಾಡುತ್ತಿದ್ದ ವೇಳೆ ಅಡುಗೆ ಅನಿಲ ಸಿಲಿಂಡರ್ ಏಕಾಏಕಿ ಸ್ಫೋಟಗೊಂಡು ತಾಯಿ-ಮಗಳು ಗಂಭೀರ ಗಾಯಗೊಂಡಿರುವ ಘಟನೆ ನಗರದ ಉದಯಗಿರಿ ಬಡಾವಣೆಯಲ್ಲಿ ಭಾನುವಾರ ರಾತ್ರಿ ಸಂಭವಿಸಿದೆ. ಸ್ಫೋಟದ ರಭಸಕ್ಕೆ ಮನೆಯ ಛಾವಣಿಯ ಒಂದು ಭಾಗ ಹಾರಿ ಹೋಗಿದೆ.

ಪಶುವೈದ್ಯ ಡಾ|| ನಾಗೇಂದ್ರ ಅವರ ಮನೆಯಲ್ಲಿ ಬಾಡಿಗೆ ಇರುವ ದಿವ್ಯಮಣಿ (55) ಹಾಗು ಪುತ್ರಿ ಮಾಲತಿ (25) ಗಾಯಗೊಂಡಿದ್ದಾರೆ. ಅಡುಗೆ ಮಾಡುತ್ತಿದ್ದಾಗಲೇ ಏಕಾಏಕಿ ಸಿಲಿಂಡರ್ ಸ್ಫೋಟ ಸಂಭವಿಸಿದೆ ಎನ್ನಲಾಗಿದೆ. ಸ್ಫೋಟದ ತೀವ್ರತೆಗೆ ಮನೆಯೊಳಗೆ ಭಾರೀ ಶಬ್ದ ಉಂಟಾಗಿದ್ದು, ಸುತ್ತಲಿನ ನಿವಾಸಿಗಳು ಆತಂಕಗೊಂಡರು.

ಮನೆಯಲ್ಲಿದ್ದ ವಸ್ತುಗಳು ಹಾನಿಗೊಳಗಾಗಿವೆ. ಜೋರು ಶಬ್ದ ಕೇಳುತ್ತಿದ್ದಂತೆ ಅಕ್ಕಪಕ್ಕದ ನಿವಾಸಿಗಳು ಸ್ಥಳಕ್ಕೆ ಧಾವಿಸಿ ಗಾಯಗೊಂಡಿದ್ದ ತಾಯಿ-ಮಗಳಿಗೆ ನೆರವಾದರು. ಗಾಯಾಳುಗಳನ್ನು ಸ್ಥಳೀಯ ನಿವಾಸಿಗಳು ಆಸ್ಪತ್ರೆಗೆ ದಾಖಲಿಸಿದ್ದು ಚಿಕಿತ್ಸೆ ಮುಂದುವರಿದಿದೆ. ಬಡಾವಣೆ ಠಾಣೆ ಪೊಲೀಸರು ಪರಿಶೀಲಿಸಿದರು.

## ಧಾರಾಕಾರ ಮಳೆ ನಡುವೆಯೂ ಕಾರ್ಯಾಚರಣೆ | ಆರು ಕುಮ್ಕಿ ಆನೆಗಳು ಭಾಗಿ

# ಭುವನೇಶ್ವರಿ ಗುಂಪಿನ ಆನೆಗೆ ರೇಡಿಯೋ ಕಾಲರ್ ಅಳವಡಿಕೆ

• ಪ್ರಜೋದಯ ವರದಿ

**ಹಾಸನ:** ಎರಡು ಕಾಡಾನೆಗಳಿಗೆ ರೇಡಿಯೋ ಕಾಲರ್ ಅಳವಡಿಕೆ, ಒಂದು ಆನೆ ಸೆರೆಗೆ ಕಾರ್ಯಾಚರಣೆ ಕೈಗೊಂಡಿರುವ ಅರಣ್ಯ ಇಲಾಖೆ ಸೋಮವಾರ ಭುವನೇಶ್ವರಿ ಗುಂಪಿನಲ್ಲಿದ್ದ ಆನೆಯೊಂದಕ್ಕೆ ರೇಡಿಯೋ ಕಾಲರ್ ಅಳವಡಿಸುವಲ್ಲಿ ಯಶಸ್ವಿಯಾಗಿದೆ.

ನಿರಂತರ ಮಳೆಯ ನಡುವೆಯೂ ಬೇಲೂರು ತಾಲ್ಲೂಕಿನ ಮಲಸಾವರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಡೆನಹಳ್ಳಿ ಗ್ರಾಮದ ದಟ್ಟ ಕಾಡಿನಲ್ಲಿ ಕುಮ್ಕಿ ಆನೆಗಳ ನೆರವಿನೊಂದಿಗೆ ರೇಡಿಯೋ ಕಾಲರ್ ಹಾಕಲಾಯಿತು. ಕಾರ್ಯಾಚರಣೆಗಾಗಿ ದುಬಾರೆ ಹಾಗು ನಾಗರಹೊಳೆ ಆನೆ ಶಿಬಿರದಿಂದ ಏಕಲವ್ಯ, ಧನಂಜಯ, ಲಕ್ಷ್ಮಣ, ಪ್ರಶಾಂತ, ಈಶ್ವರ ಹಾಗು ಅಜ್ಜಯ್ಯ ಆನೆಗಳು ಭಾನುವಾರ ಚಿಕ್ಕೋಲೆ ಸಮೀಪ ನಿರ್ಮಿಸಿರುವ ತಾತ್ಕಾಲಿಕ ಆನೆ ಶಿಬಿರಕ್ಕೆ ಆಗಮಿಸಿವೆ.

ಸೋಮವಾರ ಬೆಳಿಗ್ಗೆ 10 ಗಂಟೆಗೆ ಸಾಕಾನೆಗಳಿಗೆ ಸ್ನಾನ ಮಾಡಿಸಿದ ಮಾವುತರು ಹಾಗು ಕಾವಾಡಿಗರು ನಂತರ





ಪೂಜೆ ನೆರವೇರಿಸಿದರು. ನಂತರ ಲಾರಿ ಹತ್ತಿದ ಸಾಕಾನೆಗಳು ಜೋರು ಮಳೆ ನಡುವೆಯೇ ಮಧ್ಯಾಹ್ನ 12ರ ವೇಳೆಗೆ ಮಲಸಾವರ ಸಮೀಪದ ಮಡೆನಹಳ್ಳಿ ತಲುಪಿದವು. ಗ್ರಾಮದ ಚಿದಾನಂದ, ವಿನೋದ್ ಎಂಬುವವರು ಕಾಫಿ ತೋಟದ ಪಕ್ಕದ ಕಾಡಿನಲ್ಲಿ ಆನೆಗಳು ಬೀಡು ಬಿಟ್ಟಿರುವ ವಿಷಯ ಇಟಿಎಫ್ ಸಿಬ್ಬಂದಿ ನಡೆಸಿದ ಟ್ರ್ಯಾಕಿಂಗ್‌ನಿಂದ ತಿಳಿಯಿತಾದರೂ ಧಾರಾಕಾರ ಮಳೆ ಕಾರ್ಯಾಚರಣೆಗೆ ಅಡ್ಡಿಪಡಿಸಿತು. ಸಾಕಾನೆಗಳನ್ನು ಲಾರಿಯಿಂದ ಕೆಳಗಿಳಿಸಲು ಬಹಳ ಸಮಯ ಬೇಕಾಯಿತು. ತೋಟದಲ್ಲಿ ಅಳವಡಿಸಿರುವ ಸೋಲಾರ್ ತಂತಿ ಬೇಲಿ ಬಂದ್ ಮಾಡುವಂತೆ ಮಾಲೀಕರಿಗೆ ಡಿಸಿಎಫ್ ಸೌರಭ್‌ಕುಮಾರ್ ಸೂಚಿಸಿದರು.

### ಇಂದು ತಂಡ ಸೇರಲಿರುವ ಮಹೇಂದ್ರ

ಕಾಡಾನೆ ಸೆರೆ ಕಾರ್ಯಾಚರಣೆ ಅರಣ್ಯ ಇಲಾಖೆಗೆ ಸವಾಲಿನ ಕೆಲಸವಾಗಿದ್ದು, ಈಗಿರುವ ಕುಮ್ಕಿ ಆನೆಗಳ ನೆರವಿಗಾಗಿ ನಾಗರಹೊಳೆ ಶಿಬಿರದಿಂದ ಮಹೇಂದ್ರ ಆನೆಯೂ ಬರಲಿದೆ. ಹಗಲು ಹೊತ್ತು ವಿಶ್ರಾಂತಿಯಲ್ಲಿರುವ ಕಾಡಾನೆ ರಾತ್ರಿ ಗ್ರಾಮದೊಳಗೆ ಪ್ರವೇಶಿಸಿ ದಾಂಧಲೆ ಮಾಡುತ್ತಿದೆ. ಈ ಆನೆ ಹಿಡಿಯುವುದು ಅತ್ಯವಶ್ಯಕವಾಗಿರುವುದರಿಂದ ಮಂಗಳವಾರದಿಂದ ಕಾರ್ಯಾಚರಣೆ ಪ್ರಾರಂಭವಾಗಲಿದೆ.

**ಎರಡೂ ಗುಂಪು ಒಂದೇ ಕಡೆ ಜಮಾವಣೆ**

ಮಲಸಾವರದ ಮುಖ್ಯ ರಸ್ತೆಯಲ್ಲಿ ಸಾಕಾನೆಗಳನ್ನು ಕೆಳಗಿಳಿಸಿದ ಅರಣ್ಯ ಇಲಾಖೆ ಅಧಿಕಾರಿಗಳು ಅಲ್ಲಿಂದ ಸುಮಾರು 2 ಕಿ.ಮೀ. ಸಿಮೆಂಟ್ ರಸ್ತೆಯಲ್ಲಿ ಕಾಲ್ನಡಿಗೆಯಲ್ಲಿ ಹೋಗಲು ನಿರ್ಧರಿಸಿದರು. ಅಷ್ಟರಲ್ಲಿ ಇಟಿಎಫ್ ಸಿಬ್ಬಂದಿ ಭುವನೇಶ್ವರಿ ಗುಂಪಿನ ಕಾಡಾನೆಗಳಿರುವ ಜಾಗವನ್ನು ಖಚಿತ ಪಡಿಸಿಕೊಂಡಿದ್ದರು. ಆದರೆ, ಕೆಲವೇ ಸಮಯದಲ್ಲಿ ಬೀಟಮ್ಮ 2 ಗುಂಪಿನ ಆನೆಗಳು ಅಲ್ಲೇ ಬಂದಿದ್ದರಿಂದ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಲಾಯಿತು. ಗುಂಪಿನಲ್ಲಿರುವ ಆನೆಯೊಂದು ಭಾರೀ ಉಪಟಳ ನೀಡುವ ಹಿನ್ನಲೆಯಲ್ಲಿ ಪರಿಸ್ಥಿತಿ ಬಿಗಡಾಯಿಸಬಾರದೆಂದು ಬೀಟಮ್ಮ 2 ಗುಂಪು ಅಲ್ಲಿಂದ ತೆರಳುವ ವರೆಗೆ ಅಧಿಕಾರಿಗಳು ಸುಮ್ಮನಾಗಬೇಕಾಯಿತು. ಸುಮಾರು ಒಂದು ಗಂಟೆಯ ನಂತರ ಆ ಗುಂಪು ಅಲ್ಲಿಂದ ಚದುರಿದ ಮಾಹಿತಿಯನ್ನು ಡ್ರೋನ್ ಕ್ಯಾಮರಾದಿಂದ ಪಡೆದ ವೈದ್ಯಾಧಿಕಾರಿಗಳು ಸಾಕಾನೆಗಳಾದ ಏಕಲವ್ಯ ಹಾಗು ಪ್ರಶಾಂತನ ಮೇಲೆ ಸವಾರಿ ಮಾಡಿದರು. ನಂತರ ಉಳಿದ ನಾಲ್ಕು ಕುಮ್ಕಿ ಆನೆಗಳು ರೇಡಿಯೋ ಕಾಲರ್, ಬೃಹದಾಕಾರದ ಹಗ್ಗ ಹಾಗು ನೀರಿನ ಕ್ಯಾನ್‌ನೊಂದಿಗೆ ಹೆಜ್ಜೆ ಹಾಕಿದವು. ಸಾರ್ವಜನಿಕರ ಪ್ರವೇಶವನ್ನು ನಿಷೇಧಿಸಲಾಗಿತ್ತು.

ಭುವನೇಶ್ವರಿ ಗುಂಪಿನಲ್ಲಿದ್ದ ಸುಮಾರು 30 ವರ್ಷದ ಹೆಣ್ಣಾನೆಯನ್ನು ಬೇರ್ಪಡಿಸಿ ಬಂಡಿಪುರದ ಪಶು ವೈದ್ಯ ಡಾ|| ವಾಸಿಂ ಅರವಳಿಕೆ ಚುಚ್ಚುಮದ್ದು ನೀಡುತ್ತಿದ್ದಂತೆ ಓಡಿ ಹೋದ ಕಾಡಾನೆ ಸುಮಾರು ಒಂದೂವರೆ ಗಂಟೆ ನಂತರ ನಿತ್ರಾಣಗೊಂಡು ಓಟ ನಿಲ್ಲಿಸಿತು. ಬಳಿಕ ಅಕ್ಕಪಕ್ಕ ಎರಡು ಸಾಕಾನೆಗಳನ್ನು ನಿಲ್ಲಿಸಿಕೊಂಡು ರೇಡಿಯೋ ಕಾಲರ್ ಅಳವಡಿಸಲಾಯಿತು.

ಡಿಸಿಎಫ್ ಸೌರಭ್‌ಕುಮಾರ್ ಅವರು ಮಾತನಾಡಿ, ಇದೇ ಕಾಡಾನೆಗೆ 2023ರ ಜುಲೈನಲ್ಲಿ ವಿದೇಶದಲ್ಲಿ ನಿರ್ಮಿಸಲಾದ ರೇಡಿಯೋ ಕಾಲರ್ ಅಳವಡಿಸಲಾಗಿತ್ತು. ಎರಡೂವರೆ ವರ್ಷದಿಂದ ಮೂರು ವರ್ಷ ಬಾಳಿಕೆ ಬರುವ ಬ್ಯಾಟರಿಯನ್ನು ಅದು ಹೊಂದಿರುತ್ತದೆ. ಹದಿನೈದು ದಿನಗಳ ಮೊದಲು ಬ್ಯಾಟರಿ ಹಾಳಾಗಿದ್ದರಿಂದ ಸ್ವದೇಶಿ ನಿರ್ಮಿತ ರೇಡಿಯೋ ಕಾಲರ್ ಅಳವಡಿಸಲಾಗಿದೆ ಎಂದರು.

ಕಾರ್ಯಾಚರಣೆಯಲ್ಲಿ ಪಶುವೈದ್ಯಾಧಿಕಾರಿ ಡಾ|| ಆದರ್ಶ್, ಭದ್ರಾ ಹುಲಿ ಸಂರಕ್ಷಿತ ಪ್ರದೇಶದ ಡಾ|| ವಿನಾಯಕ, 300ಕ್ಕೂ ಹೆಚ್ಚು ಸಿಬ್ಬಂದಿ ಇದ್ದರು.

# ಶೀಘ್ರವಾಗಿ ವಿದ್ಯುತ್ ವ್ಯವಸ್ಥೆ ಸುಧಾರಣೆ

## ಮಗ್ಗೆ ವಿದ್ಯುತ್ ಉಪಘಟಕದಿಂದ ಕಣದಲ್ಲಿ ವಿಂಗಡಣೆ ಫೀಡರ್‌ಗೆ ಶಾಸಕ ಸಿಮೆಂಟ್ ಮಂಜು ಚಾಲನೆ

• ಪ್ರಜೋದಯ ವರದಿ

**ಆಲೂರು:** ತಾಲ್ಲೂಕಿನಲ್ಲಿ ಎದುರಾಗಿರುವ ವಿದ್ಯುತ್ ವ್ಯವಸ್ಥೆಯನ್ನು ಹಂತ ಹಂತವಾಗಿ ಸರಿಪಡಿಸಲಾಗುವುದು ಎಂದು ಶಾಸಕ ಸಿಮೆಂಟ್ ಮಂಜು ಅವರು ಭರವಸೆ ನೀಡಿದರು.



ಮಗ್ಗೆ ವಿದ್ಯುತ್ ಉಪಘಟಕದಿಂದ ಕಣದಲ್ಲಿ ವಿಂಗಡಣೆ ಫೀಡರ್‌ಗೆ ಚಾಲನೆ ನೀಡಿ ಮಾತನಾಡಿ, ನೂತನ ಉಪಘಟಕ ಪೂರ್ಣಗೊಳ್ಳುವವರೆಗೆ ಇರುವ ವಿದ್ಯುತ್ ಸಮಸ್ಯೆಯನ್ನು ತಗ್ಗಿಸುವ ಉದ್ದೇಶದಿಂದ ವಿವಿಧ ಫೀಡರ್‌ಗಳನ್ನು ವಿಭಜಿಸಿ ವಿದ್ಯುತ್ ಪೂರೈಕೆಯನ್ನು ಸುಧಾರಿಸಲಾಗುತ್ತಿದೆ ಎಂದು ತಿಳಿಸಿದರು.

ಈವರೆಗೆ ಒಂದೇ ಫೀಡರ್‌ನಿಂದ ಸುಮಾರು 35 ಗ್ರಾಮಗಳಿಗೆ ವಿದ್ಯುತ್ ಪೂರೈಕೆ ಮಾಡಲಾಗುತ್ತಿತ್ತು. ಇದರಿಂದ ಹೆಚ್ಚಿನ ಲೋಡ್ ಹಾಗೂ ತಾಂತ್ರಿಕ ಸಮಸ್ಯೆಗಳಿಂದ ಪದೇಪದೆ ವಿದ್ಯುತ್ ವ್ಯತ್ಯಯ ಉಂಟಾಗುತ್ತಿತ್ತು. ಇದೀಗ ಹಳೆಯ ಫೀಡರ್ ಅನ್ನು ವಿಭಜಿಸಿ ಕಣದಲ್ಳಿ ಹಾಗೂ ಪಾಳ್ಯ ಎಂಬ ಎರಡು ಪ್ರತ್ಯೇಕ ಫೀಡರ್‌ಗಳಾಗಿ ಮಾಡಲಾಗಿದೆ ಎಂದು ಮಂಜ ಅವರು ಹೇಳಿದರು.

ಒಂದು ಫೀಡರ್‌ನಿಂದ ಸುಮಾರು 12 ಗ್ರಾಮಗಳಿಗೆ ಹಾಗೂ ಮತ್ತೊಂದು ಫೀಡರ್‌ನಿಂದ ಸುಮಾರು 13 ಗ್ರಾಮಗಳಿಗೆ ವಿದ್ಯುತ್ ಪೂರೈಕೆ ಮಾಡುವ ವ್ಯವಸ್ಥೆ ಕಲ್ಪಿಸಲಾಗಿದೆ. ಇದರಿಂದ ವಿದ್ಯುತ್ ಮೇಲಿನ ಒತ್ತಡ ಕಡಿಮೆಯಾಗುವುದರ ಜತೆಗೆ ರೈತರಿಗೆ ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ಗುಣಮಟ್ಟದ ವಿದ್ಯುತ್ ದೊರೆಯಲಿದೆ. ಮಗ್ಗೆ ವಿದ್ಯುತ್ ಉಪ ಘಟಕ ಬಹಳ ಹಳೆಯದಾಗಿದ್ದು, ಇಲ್ಲಿಂದಲೇ ತಾಲೂಕಿನ ವಿವಿಧ ಭಾಗಗಳಿಗೆ ವಿದ್ಯುತ್ ಸರಬರಾಜು ಮಾಡಲಾಗುತ್ತಿತ್ತು. ಒಂದೇ ಉಪ ಘಟಕದ ಮೇಲೆ ಹೆಚ್ಚಿನ ಒತ್ತಡ ಇರುವುದರಿಂದ ರೈತರಿಗೆ ಅಗತ್ಯ ಪ್ರಮಾಣದಲ್ಲಿ ಹಾಗೂ ಗುಣಮಟ್ಟದ ವಿದ್ಯುತ್ ನೀಡಲು ತೊಂದರೆಯಾಗುತ್ತಿದೆ ಎಂದು ವಿವರಿಸಿದರು.

ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ದಾನಿಹಳ್ಳಿಯಲ್ಲಿ ನೂತನ ವಿದ್ಯುತ್ ಉಪಘಟಕದ ಕಾಮಗಾರಿ ಆರಂಭಿಸಲಾಗಿದ್ದು, ಈಗಾಗಲೇ ಚಾಲನೆ ನೀಡಲಾಗಿದೆ. ಕಾಮಗಾರಿ ನಿರೀಕ್ಷಿತ ವೇಗದಲ್ಲಿ ನಡೆದರೆ ಆರರಿಂದ ಎಂಟು ತಿಂಗಳೊಳಗೆ ಉಪಘಟಕವನ್ನು ಉದ್ಘಾಟಿಸುವ ವಿಶ್ವಾಸವಿದೆ ಎಂದರಲ್ಲದೆ, ಸುಮಾರು 8 ಕಿ.ಮೀ. ಉದ್ದದ ವಿದ್ಯುತ್ ಮಾರ್ಗ ನಿರ್ಮಿಸಿ, 44 ಲಕ್ಷ ರೂ.ಗಳ ವೆಚ್ಚದಲ್ಲಿ ಕಾಮಗಾರಿ ಪೂರ್ಣಗೊಳಿಸಲಾಗಿದ್ದು, ಇದೀಗ ನೂತನ ಫೀಡರ್‌ಗೆ ಚಾಲನೆ ನೀಡಲಾಗಿದೆ. ಇದರಿಂದ ಈ ಭಾಗದ ರೈತರು ನೀರಾವರಿ ಪಂಪ್‌ಸೆಟ್‌ಗಳನ್ನು ಬಳಸಲು ಅನುಕೂಲವಾಗಲಿದೆ. ಮನೆಗಳಿಗೂ ಗುಣಮಟ್ಟದ ವಿದ್ಯುತ್ ಪೂರೈಕೆಯಾಗುವ ನಿರೀಕ್ಷೆಯಿದೆ ಎಂದು ಅವರು ಹೇಳಿದರು.

ವಿದ್ಯುತ್ ಸಮಸ್ಯೆಯನ್ನು ವಿಶೇಷವಾಗಿ ಮಳೆಗಾಲದಲ್ಲಿ ಗುಣಮಟ್ಟದ ವಿದ್ಯುತ್ ಪೂರೈಕೆಯ ಜತೆಗೆ ವಿದ್ಯುತ್ ಅವಘಡಗಳನ್ನು ತಡೆಯಲು ಬೇಸಿಗೆಯಲ್ಲಿ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಈ ಕುರಿತು ಈಗಾಗಲೇ ಕೆಡಿಪಿ ಸಭೆಯಲ್ಲಿ ಇಂಧನ ಸಚಿವರ ಗಮನಕ್ಕೆ ತಂದು, ತಾಲೂಕಿನ ವಿದ್ಯುತ್ ಮೂಲಸೌಕರ್ಯವನ್ನು ಬಲಪಡಿಸುವಂತೆ ಒತ್ತಾಯಿಸಲಾಗಿದೆ ಎಂದರು.

ಈ ಸಂಧರ್ಭದಲ್ಲಿ ಕಾರ್ಯಪಾಲಕ ಇಂಜಿನಿಯರ್ ವೆಂಕಟೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ತಾರನಾಥ್, ಮಲ್ಲಿಕಾರ್ಜುನ, ನಿರಂಜನ್, ಕಿರಿಯ ಕಾರ್ಯಪಾಲಕ ಇಂಜಿನಿಯರ್ ಚೇತನ್, ಕಿರಿಯ ಇಂಜಿನಿಯರ್ ಬೈರೇಶ್, ಶಶಿಕಿರಣ್, ಸ್ಥಳೀಯರಾದ ಹನುಮಂತೇಗೌಡ, ಪೂವಯ್ಯ, ಚೇತನ್, ಪಾಳ್ಯ ದೇವರಾಜ್ ಪಿ.ಡಿ.ಒ. ಪರಮೇಶ್ ಇನ್ನಿತರರು ಉಪಸ್ಥಿತರಿದ್ದರು.

ಈಗಾಗಲೆ ಬಾಳುಪೇಟೆಯಿಂದ ಕೆಂಚಾಂಬ ಫೀಡರ್‌ಗೆ ಚಾಲನೆ ನೀಡಲಾಗಿದ್ದು, ಇದರಿಂದ ಪಾಳ್ಯ ಸೇರಿದಂತೆ ಸುತ್ತಮುತ್ತಲಿನ ಹಲವು ಗ್ರಾಮಗಳಿಗೆ ಅನುಕೂಲವಾಗಲಿದೆ ಎಂದರು.

# ದೂದ್‌ಫೀರ್ ವರ್ಗಾವಣೆಗೆ ಆಗ್ರಹಿಸಿ ಪ್ರತಿಭಟನೆ



• ಪ್ರಜೋದಯ ವರದಿ

**ಹಾಸನ:** ನಗರದಲ್ಲಿ ಇತ್ತೀಚೆಗೆ ಹಮ್ಮಿಕೊಂಡಿದ್ದ ಡಾ. ಬಾಬು ಜಗಜೀವನ್ ರಾಮ್ ಅವರ ಪುಣ್ಯ ಸ್ಮರಣೆ ಕಾರ್ಯಕ್ರಮಕ್ಕೆ ಸಮುದಾಯದ ಮುಖಂಡರನ್ನು ಆಹ್ವಾನಿಸದೆ ಅಗೌರವ ತೋರಿರುವ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರ ವರ್ಗಾವಣೆ ಹಾಗು ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಆ. 14 ಮತ್ತು 15 ರಂದು ಧರಣಿ ಹಮ್ಮಿಕೊಳ್ಳಲಾಗಿದೆ ಎಂದು ಮಾದಿಗ ದಂಡೋರ ರಾಜ್ಯ ಪ್ರಧಾನ ಕಾರ್ಯದರ್ಶಿ ಟಿ.ಆರ್.ವಿಜಯಕುಮಾರ್ ಅವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿದ ಅವರು, ಆ.14 ರ ಬೆಳಿಗ್ಗೆ 11 ರಿಂದ ಆ.15ರ ಸಂಜೆ 5 ಗಂಟೆ ವರೆಗೆ ಪ್ರತಿಭಟನೆ ನಡೆಯಲಿದೆ. ಸ್ವಾತಂತ್ರ್ಯೋತ್ಸವವನ್ನು ದಲಿತರ ಮೇಲಿನ ದೌರ್ಜನ್ಯಗಳ

## ಸಮುದಾಯಕ್ಕೆ ಅಗೌರವ ತೋರಿದ ಆರೋಪ

ವಿರುದ್ಧ ಕರಾಳ ದಿನವಾಗಿ ಆಚರಿಸಿ ಸರ್ಕಾರದ ಗಮನ ಸೆಳೆಯಲಾಗುವುದು. ಅಂದು ಹೇಮಾವತಿ ಪ್ರತಿಮೆ ಮುಂಭಾಗದಿಂದ ಪ್ರತಿಭಟನಾ ಮೆರವಣಿಗೆ ಆರಂಭವಾಗಿ ಅಂಬೇಡ್ಕರ್ ಭವನದ ವರೆಗೆ ಸಾಗಲಿದೆ. ಬಳಿಕ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಮುಂಭಾಗ ಧರಣಿ ನಡೆಸಿ, ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಸಭೆ ನಡೆಸಲಾಗುವುದೆಂದು ಅವರು ಮಾಹಿತಿ ನೀಡಿದರು.

ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ದೂದ್‌ಫೀರ್ ಅವರು ಪೂರ್ವಭಾವಿ ಸಭೆ ನಡೆಸದೆ ಹಾಗು ದಲಿತ ಮುಖಂಡರಿಗೆ ಸೂಕ್ತ ಅವಕಾಶ ನೀಡದೆ ಡಾ. ಬಾಬು ಜಗಜೀವನ್ ರಾಮ್ ಅವರ ಪುಣ್ಯ ಸ್ಮರಣೆ ಕಾರ್ಯಕ್ರಮ ನಡೆಸಿದ್ದರೂ ಅವರ ಮೇಲೆ ಕ್ರಮ ಆಗಿಲ್ಲ. ಸಮುದಾಯದ ಬಗ್ಗೆ ನಿರ್ಲಕ್ಷ್ಯ ಭಾವನೆ ಹೊಂದಿರುವ ಅವರನ್ನು ಜಿಲ್ಲೆಯಿಂದ ವರ್ಗಾಯಿಸಬೇಕೆಂದು ಒತ್ತಾಯಿಸಿದರು.

ದುದ್ದ ಹೋಬಳಿಯ ದಲಿತ ಮುಖಂಡ ದೇವರಾಜ್ ಅವರ ಸ್ವಂತ ಜಮೀನಿನ ಮರಗಳನ್ನು ಕದ್ದು ಸಾಗಣೆ ಮಾಡಿದ್ದಲ್ಲದೆ, ಅವರ ಕುಟುಂಬದ ಮೇಲೇ ದೌರ್ಜನ್ಯ ನಡೆಸಲಾಗಿದೆ. ಅದಕ್ಕೆ ಕಾರಣರಾಗಿರುವ ದುದ್ದ ಪಿ.ಎಸ್.ಐ. ಅವರನ್ನು ಕೂಡಲೇ ಅಮಾನತು ಮಾಡಬೇಕು ಇಲ್ಲವೇ ವರ್ಗಾವಣೆ ಮಾಡಬೇಕೆಂದರು ಅವರು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಎಸ್.ಡಿ. ಚಂದ್ರು, ಮುನಿಸ್ವಾಮಿ, ತಿರುಪತಿಹಳ್ಳಿ ದೇವರಾಜು, ಪರಶುರಾಮು, ಚಂದ್ರಶೇಖರ್, ಶಂಕರಪ್ಪ, ಲೋಕೇಶ್ ಹಾಜರಿದ್ದರು.

# ತಾಯಿಯ ಎದೆ ಹಾಲು ಜಗದ ಸರ್ವ ಶ್ರೇಷ್ಟ ಆಹಾರ

## ಹಾರನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸ್ತನ್ಯಪಾನ ಸಪ್ತಾಹ

• ಪ್ರಜೋದಯ ವರದಿ

**ಹಾರನಹಳ್ಳಿ:** ಭೂಲೋಕದ ಅಮೃತ ಎಂದೇ ಕರೆಯಲ್ಪಡಬಹುದಾದ, ತಾಯಿಯ ಎದೆ ಹಾಲು ಜಗದ ಸರ್ವ ಶ್ರೇಷ್ಠ ಆಹಾರ. ಪ್ರತಿ ತಾಯಿ ತನ್ನ ಮಗುವಿನ ಪಾಲನೆ ಪೋಷಣೆಯಲ್ಲಿ, ಸ್ವಲ್ಪ ಕಾಳಜಿ ವಹಿಸಿದರೂ ಸಹ, ಸುಂದರ ಆರೋಗ್ಯವಂತ ಸಮಾಜ ನಿರ್ಮಾಣ ಮಾಡಬಹುದು ಎಂದು ಹಾಸನದ ಇಂಡಿಯಾನಾ ಆಸ್ಪತ್ರೆಯ ಸ್ತ್ರೀರೋಗ ತಜ್ಞೆ ಡಾ.ಇಂಪನ ಅವರು ತಿಳಿಸಿದರು.




ಪ್ರಾಥಮಿಕ ಆರೋಗ್ಯ ಕೇಂದ್ರ ಹಾರನಹಳ್ಳಿ, ಇಂಡಿಯಾನಾ ಆಸ್ಪತ್ರೆ ಹಾಸನ, ಲಯನ್ಸ್ ಕ್ಲಬ್ ಅರಸೀಕೆರೆ ಇವರ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ, ವಿಶ್ವ ಸ್ತನ್ಯಪಾನ ಸಪ್ತಾಹದಲ್ಲಿ ಮಾತನಾಡಿದ ಅವರು, ಮಗು ಹುಟ್ಟಿದ ನಂತರ ಆದಷ್ಟು ಬೇಗ ಕೊಡಬಹುದಾದ, ಹಾಲಿನಲ್ಲಿ ಕೊಲೆಸ್ಟ್ರಮ್ ಎಂಬ ಹಳದಿ ಬಣ್ಣದ ದ್ರವ್ಯ, ಮಗುವಿನ ಸರ್ವಾಂಗೀಣ ರಕ್ಷಣೆಯಲ್ಲಿ ಸಹಕರಿಸುತ್ತದೆ ಎಂದರು.

ಪ್ರಾಥಮಿಕ ಆರೋಗ್ಯ ಕೇಂದ್ರ ಹಾರನಹಳ್ಳಿಯ ವೈದ್ಯಾಧಿಕಾರಿ ಡಾ. ಯಶವಂತ್ ಅವರು ಮಾತನಾಡಿ, ಗ್ರಾಮೀಣ ಭಾಗದಲ್ಲಿ ತಾಯಂದಿರು ಆರೋಗ್ಯದ ಬಗ್ಗೆ ಕಾಳಜಿ ವಹಿಸದೆ ಇರುವುದು ದೌರ್ಭಾಗ್ಯ, ಪ್ರತಿಯೊಬ್ಬ ತಾಯಿಯೂ ತಾನು ಗರ್ಭಿಣಿ ಎಂದು ತಿಳಿದ ಬಳಿಕ, ಉತ್ಕೃಷ್ಟ ಪೌಷ್ಟಿಕ ಆಹಾರ ಸೇವಿಸಬೇಕು. ಸ್ಥಳೀಯವಾಗಿ ಸಿಗುವ ಆಹಾರವನ್ನೇ ಸೇವಿಸುವುದರಿಂದ ಆರೋಗ್ಯವು ಉತ್ತಮವಾಗಿರುತ್ತದೆ. ಅಲ್ಲದೆ ಆರೋಗ್ಯವಂತ ಮಗುವಿಗೆ ಜನ್ಮ ನೀಡುತ್ತಾಳೆ. ಕೇವಲ ಶರ್ಕರ ಪಿಷ್ಟ ಹೆಚ್ಚಿರುವ ಆಹಾರವನ್ನು ಸೇವಿಸಿದರೆ ಆರೋಗ್ಯ ಕ್ಷೀಣಿಸುತ್ತದೆ. ಪ್ರತಿಯೊಬ್ಬರೂ ಜೀವಸತ್ವಗಳು ಹೆಚ್ಚು ಇರುವ ಆಹಾರವನ್ನು ಸೇವಿಸಬೇಕು ಎಂದು ತಿಳಿಸಿದರು.

ಅರಸೀಕೆರೆ ಅಧ್ಯಕ್ಷ ಡಾ.ಸತೀಶ್ ಮಾತನಾಡಿ, ಲಯನ್ಸ್ ಸಂಸ್ಥೆಯು ಆರೋಗ್ಯ ಶಿಕ್ಷಣ ಹಾಗೂ ಪರಿಸರ ಕಾಳಜಿಗೆ ಸಾಕಷ್ಟು ಗಮನ ಕೊಡುತ್ತಿದೆ. ಜಾಗತಿಕ ಮಟ್ಟದಲ್ಲಿ ಲಯನ್ಸ್ ಕೊಡುಗೆ ಅಪಾರ. ಮುಂದಿನ ದಿನಮಾನಗಳಲ್ಲಿ ಲಯನ್ ಸಂಸ್ಥೆಯು ಸಾಕಷ್ಟು ಸಮಾಜಮುಖಿ ಹಾಗೂ ಜನಮುಖಿ ಕಾರ್ಯಕ್ರಮ ಗಳನ್ನು ಹಮ್ಮಿಕೊಂಡಿದೆ ಎಂದು ತಿಳಿಸಿದರು.

ಲಯನ್ಸ್ ಕಾರ್ಯದರ್ಶಿ ಹಾಗೂ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ ಬಿ.ಪರಮೇಶ್, ವೇದಿಕೆಯಲ್ಲಿ ಜಿಲ್ಲಾ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಭಾರತಿ, ಶೋಭಾ, ಹರೀಶ್ ಕುಮಾರ್, ಶಶಿಕಿರಣ್, ಪ್ರಸನ್ನ, ಪ್ರಮೀಳಾ, ಆಶಾ, ಆರೋಗ್ಯ ಇಲಾಖೆಯ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಹಾಜರಿದ್ದರು.

# ಮಕ್ಕಳ ಆರೋಗ್ಯಕ್ಕೆ ಜಂತುಹುಳು ಮಾತ್ರೆ ಸೇವಿಸಿ

## ಜಂತುಹುಳು ತೀವ್ರ ಆರೋಗ್ಯ ಸಮಸ್ಯೆಗೆ ಕಾರಣ: ಡಾ|| ಯುವರಾಜ್

• ಪ್ರಜೋದಯ ವರದಿ

**ಹಾಸನ:** ಪ್ರಪಂಚದಾದ್ಯಂತ ಲಕ್ಷಾಂತರ ಮಕ್ಕಳು ಕರುಳಿನ ಜಂತುಹುಳು ಸೋಂಕಿನಿಂದ ಬಳಲುತ್ತಿದ್ದಾರೆ, ಇದು ಮಕ್ಕಳ ಆರೋಗ್ಯ, ಶಿಕ್ಷಣ ಮತ್ತು ಒಟ್ಟಾರೆ ಯೋಗಕ್ಷೇಮದ ಮೇಲೆ ಪರಿಣಾಮ ಬೀರುತ್ತದೆ ಈ ನಿಟ್ಟಿನಲ್ಲಿ 1 ರಿಂದ 19 ವರ್ಷದೊಳಗಿನ ಎಲ್ಲಾ ಮಕ್ಕಳು ಜಂತು ಹುಳು ಮಾತ್ರೆಯನ್ನು ಸೇವನೆ ಮಾಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ|| ಯುವರಾಜ್ ಅವರು ತಿಳಿಸಿದ್ದಾರೆ.



ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆರ್.ಸಿ. ಹೆಚ್. ವಿಭಾಗದ ಸಂಯುಕ್ತಾಶ್ರಯದಲ್ಲಿ ಸೋಮವಾರ ಗಂಧದ ಕೋಠಿಯಲ್ಲಿರುವ ಬಾಲಕಿಯರ ಪದವಿ ಪೂರ್ವ ಕಾಲೇಜಿ (ವಿಭಜಿತ)ನಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಜಂತು ಹುಳು ನಿವಾರಣಾ ದಿನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳಲ್ಲಿ ಜಂತು ಹುಳು ಬಾಧೆ ತುಂಬಾ ಸಾಮಾನ್ಯ, ಆದರೆ ಇದು ತೀವ್ರ ಆರೋಗ್ಯ ಸಮಸ್ಯೆಗೆ ಕಾರಣವಾಗುತ್ತದೆ ಎಂದು ಅವರು ತಿಳಿಸಿದರು.

ಹೊಟ್ಟೆಯಲ್ಲಿ ಜಂತುಹುಳುಗಳು ಬೆಳೆದರೆ, ನಾವು ತಿನ್ನುವ ಆಹಾರದ ಪೌಷ್ಟಿಕಾಂಶವನ್ನು ಹುಳುಗಳು ಹೀರಿಕೊಳ್ಳುತ್ತವೆ, ಇದರಿಂದ ಮಕ್ಕಳು ರಕ್ತಹೀನತೆ ಮತ್ತು ಅಪೌಷ್ಟಿಕತೆಯಿಂದ ಬಳಲುತ್ತಾರೆ, ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಯನ್ನು ಕುಂಠಿತಗೊಳಿಸುತ್ತದೆ ಎಂದು ತಿಳಿಸಿದಲ್ಲದೆ ಉಚಿತವಾಗಿ ನೀಡುವ ಜಂತು ಹುಳು ಮಾತ್ರೆಗಳು ಸಂಪೂರ್ಣ ಸುರಕ್ಷತವಾಗಿವೆ ಎಂದು ಹೇಳಿದರು.

ಜಿಲ್ಲಾ ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಅಧಿಕಾರಿಗಳಾದ ಡಾ|| ನಿಜ್ಮ ಫಾತಿಮಾ ಅವರು ಮಾತನಾಡಿ, ಜಂತು ಹುಳುಗಳು ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ದೊಡ್ಡ ಶತ್ರುಗಳಾಗಿವೆ, ಕಲುಷಿತ ಮಣ್ಣು, ನೀರು ಹಾಗೂ ಅಶುದ್ಧ ಆಹಾರದ ಮೂಲಕ ಇವು ಮಕ್ಕಳ ಹೊಟ್ಟೆಯನ್ನು ಸೇರುತ್ತವೆ ಎಂದರು.

ಜಂತುಹುಳುಗಳು ಕರುಳಿನಲ್ಲಿ ವಾಸಿಸುತ್ತಾ, ದೇಹಕ್ಕೆ ಸಿಗಬೇಕಾದ ಪ್ರೋಟೀನ್ ಮತ್ತು ವಿಟಮಿನ್‌ಗಳನ್ನು ತಾವೇ ಹೀರಿಕೊಳ್ಳುತ್ತವೆ, ಇದು ಮಕ್ಕಳ ರೋಗನಿರೋಧಕ ಶಕ್ತಿಯನ್ನು ಕುಂಠಿತಗೊಳಿಸಿ, ಮಕ್ಕಳನ್ನು ಪದೇ ಪದೇ ಕಾಯಿಲೆಗೆ ಒಳಗಾಗುವಂತೆ ಮಾಡುತ್ತವೆ ಎಂದು ತಿಳಿಸಿದರು.

ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ರಾಮಕೃಷ್ಣಯ್ಯ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ|| ಜಗದೀಶ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಗಂಗಾಧರ್, ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ರೋಟರಿ ಸಂಸ್ಥೆಯ ಆಶಯವೇ ಸ್ನೇಹ, ಸೇವೆ



ಬೇಲೂರು: ಪಟ್ಟಣದ ಶ್ರೀ ಚೆನ್ನಕೇಶವಸ್ವಾಮಿ ದೇಗುಲಕ್ಕೆ ಧಾರವಾಡ ಜಿಲ್ಲೆಯ ಬೇಲೂರು- ಧಾರವಾಡ ರೋಟರಿ ಕ್ಲಬ್‌ನ ಅಧ್ಯಕ್ಷ ಸುಧೀಂದ್ರ ದೇಶಪಾಂಡೆ, ಕಾರ್ಯದರ್ಶಿ ಸಂದೀಪ್ ಹೊನ್ನವಾರ್ ಸೇರಿದಂತೆ ರೋಟರಿ ಸದಸ್ಯರು ಹಾಗೂ ಕುಟುಂಬ ವರ್ಗದವರು ಆಗಮಿಸಿದ ಸಂದರ್ಭದಲ್ಲಿ ಬೇಲೂರು ರೋಟರಿ ಕ್ಲಬ್ ವತಿಯಿಂದ ಸ್ನೇಹ ಮತ್ತು ಫ್ಲ್ಯಾಗ್ ಎಕ್ಸ್ ಚೇಂಜ್ ಮಾಡಿಕೊಳ್ಳಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಬೇಲೂರು ರೋಟರಿ ಕ್ಲಬ್ ಅಧ್ಯಕ್ಷ ಬಿ.ಬಿ. ಶಿವರಾಜು, ರೋಟರಿ ಸಂಸ್ಥೆಯ ಮೂಲ ಆಶಯವೇ ಸ್ನೇಹ, ಸೇವೆ ಹಾಗೂ ಸಮಾಜಮುಖಿ ಕಾರ್ಯ. ಬೇಲೂರು ಮತ್ತು ಧಾರವಾಡ ಬೇಲೂರು ರೋಟರಿ ಕ್ಲಬ್‌ಗಳ ನಡುವೆ ಸ್ನೇಹ ಹಾಗೂ ಸೌಹಾರ್ದತೆಯನ್ನು ಮತ್ತಷ್ಟು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಇಂತಹ ಕಾರ್ಯಕ್ರಮಗಳು ಮಹತ್ವದ ಪಾತ್ರ ವಹಿಸುತ್ತವೆ. ಎರಡು ಕ್ಲಬ್‌ಗಳ ಸದಸ್ಯರು ಪರಸ್ಪರ ಪರಿಚಯ ಬೆಳೆಸಿಕೊಂಡು, ಮುಂದಿನ ದಿನಗಳಲ್ಲಿ ಆರೋಗ್ಯ, ಶಿಕ್ಷಣ, ಪರಿಸರ ಸೇರಿದಂತೆ ವಿವಿಧ ಸಮಾಜಮುಖಿ ಕಾರ್ಯಗಳಲ್ಲಿ ಒಟ್ಟಾಗಿ ಕೈಜೋಡಿಸುವ ಸಂಕಲ್ಪ ಮಾಡಿದರು.

ಬೇಲೂರು -ಧಾರವಾಡ ರೋಟರಿ ಕ್ಲಬ್ ಅಧ್ಯಕ್ಷ ಸುಧೀಂದ್ರ, ದೇಶಪಾಂಡೆ ಮಾತನಾಡಿ, ಬೇಲೂರಿನ ವಿಶ್ವ ವಿಖ್ಯಾತ ಶ್ರೀ ಚೆನ್ನಕೇಶವ ಸ್ವಾಮಿ ದೇಗುಲಕ್ಕೆ ಭೇಟಿ ನೀಡುವುದು ಹಾಗೂ ಬೇಲೂರು ರೋಟರಿ ಕ್ಲಬ್ ಸದಸ್ಯರೊಂದಿಗೆ ಫ್ಲ್ಯಾಗ್ ಎಕ್ಸ್ ಚೇಂಜ್ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದು ಸಂತಸದ ಸಂಗತಿಯಾಗಿದೆ ಎಂದು ತಿಳಿಸಿದರು.

ಝೋನ್ ರ ಸಹಾಯಕ ಗೌರ್ನರ್ ಗಣೇಶ್ ಇತರರು ಉಪಸ್ಥಿತರಿದ್ದರು.

# ವೃದ್ಧಾಶ್ರಮಗಳ ಸಂಖ್ಯೆ ಕಡಿಮೆಗೊಳಿಸುವುದು ಎಲ್ಲರ ಹೊಣೆಗಾರಿಕೆ

## ಒಳ್ಳೆಯ ಕಾರ್ಯ ಮಾಡುವ ಮೂಲಕ ಈ ಜನ್ಮ ಸಾರ್ಥಕಪಡಿಸಿಕೊಳ್ಳೋಣ

• ಪ್ರಜೋದಯ ವರದಿ

**ಹಾಸನ:** ಪ್ರತಿಯೊಬ್ಬರೂ ತಮ್ಮ ತಂದೆ -ತಾಯಿಗಳನ್ನು ಪ್ರೀತಿಯಿಂದ ಕಾಣುವ ಮೂಲಕ ಸಮಾಜದಲ್ಲಿ ವೃದ್ಧಾಶ್ರಮಗಳ ಸಂಖ್ಯೆ ಕಡಿಮೆಯಾಗುವಂತೆ ಮಾಡಬೇಕಾದ ಹೊಣೆಗಾರಿಕೆ ಇದ್ದು, ಇದಾಗದಿದ್ದರೆ ಮುಂದಿನ ಪೀಳಿಗೆಯ ಮಕ್ಕಳಿಗೆ ಅಜ್ಜ-ಅಜ್ಜಿಯರ ಪ್ರೀತಿ, ವಾತ್ಸಲ್ಯಗಳು ಕಣ್ಮರೆಯಾಗಲಿದೆ ಎಂದು ಟೈಮ್ಸ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಬಿ. ಕೆ.ಗಂಗಾಧರ್ ಅಭಿಪ್ರಾಯಪಟ್ಟರು.



ನಗರದ ಬೈಪಾಸ್ ರಸ್ತೆಯಲ್ಲಿರುವ ಚೈತನ್ಯ ವೃದ್ಧಾಶ್ರಮದಲ್ಲಿ ಈಚೆಗೆ ವಿಜಯನಗರ ಬಡಾವಣೆಯಲ್ಲಿರುವ ಟೈಮ್ಸ್ ಅಂತರಾಷ್ಟ್ರೀಯ ಶಾಲೆ, ರೋಟರಿ ಕ್ಲಬ್ ಆಫ್ ಹಾಸನ ರಾಯಲ್, ಟೈಮ್ಸ್ ರೋಟರಿ ರಾಯಲ್ ಇಂಟ್ರ್ಯಾಕ್ಟ್ ಕ್ಲಬ್ ವತಿಯಿಂದ ನಡೆದ ವೃದ್ಧಾಶ್ರಮ ಭೇಟಿ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದ ಕುರಿತು ಮಾತನಾಡಿದ ಅವರು, ದೇವರು ನಮಗೆ ಅದ್ಭುತವಾದ ಮನುಷ್ಯ ಜನ್ಮವನ್ನು ನೀಡಿದ್ದಾನೆ, ನಾವುಗಳು ನಮ್ಮ ಪೂರ್ವಜರು ಹಾಕಿಕೊಟ್ಟಿರುವ ಒಳ್ಳೆಯ ಕಾರ್ಯಗಳನ್ನು ಮಾಡುವ ಮೂಲಕ ಈ ಜನ್ಮವನ್ನು ಸಾರ್ಥಕ ಮಾಡಿಕೊಳ್ಳಬೇಕು. ಮನುಷ್ಯ ಸಂಬಂಧ ಅತೀ ಮುಖ್ಯ ಗುರು ಹಿರಿಯರನ್ನು ಗೌರವಿಸುವುದು, ಒಳ್ಳೆಯದನ್ನು ಮಾತನಾಡುವುದು, ಒಳ್ಳೆಯ ಕೆಲಸ ಮಾಡುವುದು ಸೇರಿದಂತೆ ಈ ಎಲ್ಲಾವುದರೊಂದಿಗೆ ಮಾನವೀಯ ಮೌಲ್ಯಗಳನ್ನು ನಮ್ಮ ಮಕ್ಕಳಿಗೆ ತಿಳಿಸಿಕೊಡುವ ಕೆಲಸವನ್ನು ಮಾಡಬೇಕು. ಚಿಕ್ಕಮಗುವಿನಿಂದಲೇ ಅವರುಗಳಿಗೆ ನಾವುಗಳು ಮನೆಯಲ್ಲಿ ಹಾಗೆಯೇ ಶಿಕ್ಷಣ ಸಂಸ್ಥೆಗಳಲ್ಲಿ ಇಂತಹ ಗುಣಗಳನ್ನು ಹೇಳಿಕೊಡಬೇಕು. ಇಂದಿನ ಆಧುನಿಕ ಕಾಲಘಟ್ಟದಲ್ಲಿ ನಮ್ಮ ಮನೆಯ ಮಕ್ಕಳಿಗೆ ತಮ್ಮ ಅಜ್ಜ ಅಜ್ಜಿ ಅವರುಗಳ ಬಗ್ಗೆ ಏನು ತಿಳಿದಿರುವುದಿಲ್ಲ. ಇನ್ನು ಅವರುಗಳ ಪ್ರೀತಿ, ವಾತ್ಸಲ್ಯ ಇಂದಿನ ಮಕ್ಕಳಿಗೆ ಮರಿಚಿಕೆಯಾಗಿಯೇ ಹೋಗಿದೆ ಎಂದು ವಿಷಾದಿಸಿದರು.

ಆಧುನಿಕವಾಗಿ ನಾವುಗಳು ಎಷ್ಟೇ ಎತ್ತರಕ್ಕೆ ಬೆಳೆದರು, ನಮ್ಮ ತಂದೆ -ತಾಯಿ ಅವರುಗಳ ತ್ಯಾಗವನ್ನು ಮರೆಯಬಾರದು. ಹಾಗೆಯೇ ನಮ್ಮ ಮುಂದಿನ ಪೀಳಿಗೆಗೆ ನಮ್ಮ ಪೋಷಕರ ಪ್ರೀತಿ ನಮ್ಮ ಮಕ್ಕಳಿಗೆ ದೊರೆಯುವಂತೆ ನೋಡಿಕೊಳ್ಳಬೇಕು. ಮಕ್ಕಳನ್ನು ಚಿಕ್ಕ ವಯಸ್ಸಿನಲ್ಲಿ ಸಾಧ್ಯವಾದಷ್ಟು ಹಿರಿಯರೊಂದಿಗೆ ಸೇರಲು ಅವಕಾಶ ಮಾಡಿಕೊಟ್ಟರೆ ಮಕ್ಕಳು ಸಮಾಜದಲ್ಲಿ ಉತ್ತಮ ವ್ಯಕ್ತಿಗಳಾಗಿ ಬೆಳೆಯುವುದರಲ್ಲಿ ಯಾವುದೇ ಸಂಶಯವಿಲ್ಲ. ಮಕ್ಕಳು ಇಂದು ಹಿರಿಯ ಪ್ರೀತಿ, ವಾತ್ಸಲ್ಯಗಳಿಂದ ದೂರವಾಗಿ ಮೊಬೈಲ್‌ಗೆ ಅಂಟಿಕೊಂಡು ತಮ್ಮ ಜೀವನದಲ್ಲಿ ಹಾಳು ಮಾಡಿಕೊಳ್ಳುತ್ತಿದ್ದಾರೆ. ಇದರಿಂದ ನಮ್ಮ ಹಿಂದಿನ ಸಂಸ್ಕೃತಿ ನಶಿಸಲು ಕಾರಣವಾಗುತ್ತಿದ್ದು, ಮುಂದಿನ ದಿನಗಳಲ್ಲಿ ಇದು ಬದಲಾಗಿ ಮತ್ತೆ ನಮ್ಮ ಪೂರ್ವಜರು ಹಾಕಿಕೊಟ್ಟ ಮಾರ್ಗದಲ್ಲಿ ನಾವು ನಡೆಯಬೇಕಿದೆ ಎಂದು ಹೇಳಿದರು.

ವೃದ್ಧಾಶ್ರಮಕ್ಕೆ ಭೇಟಿ ನೀಡಿದ್ದ ಶಾಲಾ ಮಕ್ಕಳು ಅಲ್ಲಿನ ಹಿರಿಯರಿಗೆ ಹಣ್ಣು ಹಂಪಲು ನೀಡಿದರು. ಹಾಗೆಯೇ ಶಾಲೆಯ ವತಿಯಿಂದ ಹಿರಿಯರಿಗೆ ಅವಶ್ಯಕವಾಗಿ ಬೇಕಾಗುವ ಸಾಮಗ್ರಿಗಳನ್ನು ಮಕ್ಕಳು ವಿತರಣೆ ಮಾಡಿದರು.

ಹಾಸನ ರಾಯಲ್ ಅಧ್ಯಕ್ಷ ದಿಲೀಪ್‌ಕುಮಾರ್, ಡಾ.ಎಚ್.ಎನ್. ಹರೀಶ್, ಪವನ್, ಕ್ಲಬ್ ಸದಸ್ಯರು, ಶಾಲಾ ಶಿಕ್ಷಕರು, ಸಿಬ್ಬಂದಿ ಇದ್ದರು.

# ಲೋಕಕಲ್ಯಾಣಾರ್ಥ ಮಹಾ ಚಂಡಿಕಾ ಹೋಮ

• ಪ್ರಜೋದಯ ವರದಿ

**ಹಾರನಹಳ್ಳಿ:** ಇಲ್ಲಿನ ಯಳವಾರೆ ಗ್ರಾಮದೇವತೆ ಶ್ರೀ ಹುಚ್ಚಮ್ಮದೇವಿ ದೇವಾಲಯದ ಸನ್ನಿಧಾನದಲ್ಲಿ ಭಾನುವಾರ ಲೋಕಕಲ್ಯಾಣಾರ್ಥವಾಗಿ ಮಹಾ ಚಂಡಿಕಾ ಹೋಮ ನಡೆಯಿತು.



ಯಾದಾಪುರದ ಶ್ರೀ ಜೇನುಕಲ್ ಸಿದ್ದೇಶ್ವರ ಸ್ವಾಮಿ, ಯಳವಾರೆ ಶ್ರೀ ಹುಚ್ಚಮ್ಮ ದೇವಿ, ಶ್ರೀ ಚೆಲುರಾಯಸ್ವಾಮಿ, ಶ್ರೀ ದೂತರಾಯ ಸ್ವಾಮಿ, ಹಾರನಹಳ್ಳಿ ಗ್ರಾಮ ದೇವತೆ ಶ್ರೀ ಕೊಡಮ್ಮದೇವಿ, ಶ್ರೀ ಧೂತ ರಾಯಸ್ವಾಮಿ ಸಾನಿಧ್ಯದಲ್ಲಿ ಚಂಡಿಕಾ ಹೋಮ ನಡೆಯಿತು.

ಬೆಳಿಗ್ಗೆ 7:30ಕ್ಕೆ ಆರಂಭದಲ್ಲಿ ಸಂಕಲ್ಪ ಗಣಪತಿ ಪೂಜೆಪುಣ್ಯಾಹಃ ಹುಚ್ಚಮ್ಮ ಚೌಡಮ್ಮದೇವಿ ಸನ್ನಿಧಿಯಲ್ಲಿ ಅಮ್ಮನವರಿಗೆ ಅಭಿಷೇಕ ಕಳಶ ಸ್ಥಾಪನೆ ಮಂಡಲ ರಚನೆ ಅರ್ಚನೆ ಇತ್ಯಾದಿ ಧಾರ್ಮಿಕ ಕಾರ್ಯಕ್ರಮಗಳು ನಡೆದ ನಂತರ ಮಂಗಳ ದ್ರವ್ಯಗಳೊಂದಿಗೆ ಚಂಡಿಕಾಹೋಮದ ಮಹಾ ಪೂರ್ಣಾಹುತಿ ನಡೆಯಿತು.

ಸುಮಂಗಲಿ ಪೂಜೆ ಆರತಿ ಮಹಾ ಮಂಗಳಾರತಿ ಕಾರ್ಯಕ್ರಮಗಳು ನಡೆಯಿತು. ಹಾಸನದ ವೇದ ಬ್ರಹ್ಮಶ್ರೀ ಎಂ.ವಿ.ಕೃಷ್ಣಮೂರ್ತಿ ಘನಪಾಠಿಗಳ ಆಚಾರ್ಯತ್ವದಲ್ಲಿ ಚಂಕಾ ಹೋಮ ಕಾರ್ಯಕ್ರಮ ನಡೆಯಿತು.

ಗ್ರಾಮ ದೇವತೆ ಹುಚ್ಚಮ್ಮ ದೇವಿಯ ಸನ್ನಿಧಿಯಲ್ಲಿ ಚಂಡಿಕಾ ಹವನ ನಡೆದಿದ್ದು ಎಲ್ಲರ ದುಃಖ ಕಷ್ಟ ದುರಿತಗಳನ್ನು ಚಂಡಿಕಾ ಪರಮೇಶ್ವರಿ ನಾಶ ಮಾಡಿ ಲೋಕ ಕಲ್ಯಾಣವಾಗಲಿ ಎಂದು ಆಶೀರ್ವದಿಸಿದರು.

ಚಂಡಿಕಾ ಹೋಮದ ಸೇವೆ ಯಳವಾರೆ ಹುಚ್ಚಮ್ಮದೇವಿ ಸಮಿತಿ ಟ್ರಸ್ಟ್ ವತಿಯಿಂದ ಭಕ್ತಾದಿಗಳ ಸಹಕಾರದಿಂದ ಮಹಾ ಚಂಡಿಕಾ ಹೋಮದ ಸೇವೆಯನ್ನು ನೆರವೇರಿಸಿದರು. ಶ್ರೀ ಚೆಲುವರಾಯಸ್ವಾಮಿ ಹಾರನಹಳ್ಳಿ ದೂತರಾಯಸ್ವಾಮಿ ದೇವರುಗಳ ಪ್ರಕಾರ ಉತ್ಸವ ಸೋಮನ ಕುಣಿತ ನಡೆಯಿತು.

## ಪೌಷ್ಟಿಕ ಆಹಾರ ಸೇವಿಸುವುದರ ಜತೆಗೆ ನಿಯಮಿತ ಆರೋಗ್ಯ ತಪಾಸಣೆಯೂ ಅಗತ್ಯ

# 25ಕ್ಕೂ ಹೆಚ್ಚು ಗರ್ಭಿಣಿಯರಿಗೆ ಪೌಷ್ಟಿಕ ಆಹಾರ ಕಿಟ್ ವಿತರಣೆ

• ಪ್ರಜೋದಯ ವರದಿ

**ಬೇಲೂರು:** ತಾಯಿ ಆರೋಗ್ಯವಂತಳಾಗಿದ್ದರೆ ಮಾತ್ರ ಆರೋಗ್ಯವಂತ ಮಗುವಿನ ಜನನ ಸಾಧ್ಯ. ಗರ್ಭಿಣಿಯರು ಪೌಷ್ಟಿಕ ಆಹಾರ ಸೇವಿಸುವುದರ ಜತೆಗೆ ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ತಾಯಿ ಮತ್ತು ಮಗುವಿನ ಆರೋಗ್ಯದ ಬಗ್ಗೆ ಕುಟುಂಬದವರು ಹಾಗೂ ಸಮಾಜ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ರೋಟರಿ ಕ್ಲಬ್ ಬೇಲೂರು ಅಧ್ಯಕ್ಷ ಬಿ.ಬಿ. ಶಿವರಾಜ್ ಅವರು ಹೇಳಿದರು.



ಗಂಗೂರು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಡಿಸ್ಟ್ರಿಕ್ಟ್-3182, ಝೋನ್-8 ರ ರೋಟರಿ ಕ್ಲಬ್ ಬೇಲೂರು ವತಿಯಿಂದ ಆಯೋಜಿಸಿದ್ದ ಮಾತೃ ಶಿಶು ಆರೋಗ್ಯ ಜಾಗೃತಿ ಹಾಗೂ ಪೌಷ್ಟಿಕ ಆಹಾರ ಕಿಟ್ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, 25ಕ್ಕೂ ಹೆಚ್ಚು ಗರ್ಭಿಣಿಯರಿಗೆ ಪೌಷ್ಟಿಕ ಆಹಾರ ಕಿಟ್‌ಗಳನ್ನು ವಿತರಿಸಿ ಮಾತನಾಡಿದ ಅವರು, ಗರ್ಭಾವಸ್ಥೆಯಲ್ಲಿ ತಾಯಂದಿರಿಗೆ ಅಗತ್ಯವಾದ ಪೌಷ್ಟಿಕಾಂಶ ದೊರೆಯುವುದು ಅತ್ಯಂತ ಮುಖ್ಯ. ಆರೋಗ್ಯ ಕ್ಷೇತ್ರದ ಜತೆಗೆ ಶಿಕ್ಷಣ, ಪರಿಸರ ಹಾಗೂ ಸಮಾಜಮುಖಿ ಸೇವೆಗಳಿಗೆ ರೋಟರಿ ಕ್ಲಬ್ ಆದ್ಯತೆ ನೀಡುತ್ತಿದ್ದು, ಅಗತ್ಯವಿರುವವರಿಗೆ ನೆರವು ನೀಡುವ ಮೂಲಕ ಸಮಾಜದಲ್ಲಿ ಆರೋಗ್ಯ ಜಾಗೃತಿ ಮೂಡಿಸುವ ಕಾರ್ಯ ಮುಂದುವರಿಸಲಾಗುವುದು ಎಂದರು.

ಗಂಗೂರು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ರಾಘವೇಂದ್ರ ಜಿ.ಆರ್.ಮಾತನಾಡಿ, ಗರ್ಭಿಣಿಯರ ಆರೋಗ್ಯದ ದೃಷ್ಟಿಯಿಂದ ಪ್ರತಿ ತಿಂಗಳ ಆರೋಗ್ಯ ಕೇಂದ್ರಗಳಲ್ಲಿ ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ ಅಡಿಯಲ್ಲಿ ಉಚಿತ ಆರೋಗ್ಯ ತಪಾಸಣೆ ಹಾಗೂ ಅಗತ್ಯ ರಕ್ತ ಪರೀಕ್ಷೆಗಳನ್ನು ನಡೆಸಲಾಗುತ್ತದೆ. ಗರ್ಭಿಣಿಯರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ರಕ್ತದೊತ್ತಡ, ಥೈರಾಯ್ಡ್, ಮಧುಮೇಹ ಸೇರಿದಂತೆ ಆರೋಗ್ಯ ಸಮಸ್ಯೆಗಳಿರುವ ಗರ್ಭಿಣಿಯರನ್ನು ಹೈರಿಸ್ಕ್ ಪ್ರಕರಣಗಳೆಂದು ಗುರುತಿಸಿ ಹೆಚ್ಚಿನ ವೈದ್ಯಕೀಯ ಆರೈಕೆ ನೀಡಲಾಗುತ್ತದೆ. ಗರ್ಭಾವಸ್ಥೆಯಲ್ಲಿ ಹಿಮೋಗ್ಲೋಬಿನ್ ಪ್ರಮಾಣವನ್ನು ನಿಯಮಿತವಾಗಿ ಪರೀಕ್ಷಿಸಿಕೊಳ್ಳಬೇಕು. ರಕ್ತದ ಪ್ರಮಾಣ ಕಡಿಮೆಯಾದರೆ ತಾಯಿ ಹಾಗೂ ಮಗುವಿನ ಆರೋಗ್ಯದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇರುವುದರಿಂದ ಪೌಷ್ಟಿಕ ಆಹಾರ ಸೇವನೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರಲ್ಲದೆ, ಪ್ರತಿಯೊಬ್ಬ ಗರ್ಭಿಣಿಯೂ ನಿಯಮಿತವಾಗಿ ಪ್ರಸವಪೂರ್ವ ತಪಾಸಣೆಗೆ ಒಳಗಾಗಬೇಕು. ಅಗತ್ಯ ಸ್ಕ್ಯಾನಿಂಗ್ ಹಾಗೂ ರಕ್ತ ಪರೀಕ್ಷೆಗಳನ್ನು ವೈದ್ಯರ ಸಲಹೆಯಂತೆ ಮಾಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಪ್ರಾಥಮಿಕ ಆರೋಗ್ಯ ಕೇಂದ್ರದ ಸುರಕ್ಷತಾ ಅಧಿಕಾರಿ ಕಾವ್ಯಶ್ರೀ ಅವರು ಮಾತನಾಡಿ, ಗರ್ಭಿಣಿಯರು ಆರೋಗ್ಯ ನಿರ್ಲಕ್ಷಿಸಬಾರದು. ಗರ್ಭಿಣಿಯರಿಗೆ ಒಂಬತ್ತು ತಿಂಗಳ ಅವಧಿ ತಮ್ಮ ಆರೋಗ್ಯವನ್ನು ಉತ್ತಮಪಡಿಸಿಕೊಳ್ಳಲು ದೊರೆಯುತ್ತದೆ. ಈ ಅವಧಿಯಲ್ಲಿ ರಕ್ತದ ಪ್ರಮಾಣ ಹಾಗೂ ಮಗುವಿನ ಬೆಳವಣಿಗೆ ಉತ್ತಮವಾಗುವಂತೆ ಪೌಷ್ಟಿಕ ಆಹಾರ ಸೇವಿಸಬೇಕು. ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸಿದರೆ ಹೆರಿಗೆ ಸಂದರ್ಭದಲ್ಲಿ ತೊಂದರೆ ಎದುರಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು.

ಗರ್ಭಿಣಿಯರು ಪ್ರತಿ ತಿಂಗಳು ರಕ್ತದೊತ್ತಡ, ರಕ್ತದಲ್ಲಿನ ಸಕ್ಕರೆ ಹಾಗೂ ಹಿಮೋಗ್ಲೋಬಿನ್ ಸೇರಿದಂತೆ ಅಗತ್ಯ ಪರೀಕ್ಷೆ ಮಾಡಿಸಿಕೊಳ್ಳಬೇಕು. ವೈದ್ಯರು ನೀಡುವ ಸಲಹೆಗಳನ್ನು ತಪ್ಪದೆ ಪಾಲಿಸಬೇಕು. ಗ್ರಾಮೀಣ ಭಾಗದ ಮಹಿಳೆಯರು ಗರ್ಭಾವಸ್ಥೆಯಲ್ಲೂ ಮನೆಯ ಕೆಲಸದ ಜವಾಬ್ದಾರಿಗಳನ್ನು ನಿರ್ವಹಿಸಬೇಕಾಗಿರುವುದರಿಂದ ಕುಟುಂಬದವರು ಅವರಿಗೆ ಸೂಕ್ತ ವಿಶ್ರಾಂತಿ ಮತ್ತು ಪೌಷ್ಟಿಕ ಆಹಾರ ಒದಗಿಸಬೇಕು ಎಂದು ಕಿವಿಮಾತು ಹೇಳಿದರು.

ಆರೋಗ್ಯವಂತ ತಾಯಿಯಾಗುವುದು ನಿಮ್ಮ ಜವಾಬ್ದಾರಿ ಮಾತ್ರವಲ್ಲ, ಆರೋಗ್ಯವಂತ ಮಗುವನ್ನು ಕುಟುಂಬ ಹಾಗೂ ಸಮಾಜಕ್ಕೆ ನೀಡುವುದೂ ನಿಮ್ಮ ಜವಾಬ್ದಾರಿ. ಹೀಗಾಗಿ ಆರೋಗ್ಯದ ಬಗ್ಗೆ ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ಮಾಡಬೇಡಿ ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ರೋಟರಿ ಕ್ಲಬ್ ಕಾರ್ಯದರ್ಶಿ ರಾಘವೇಂದ್ರ, ಖಜಾಂಚಿ ಬಿ.ಎಲ್.ರಾಜೇಗೌಡ, ಸಂದೇಶ್, ರೋಟರಿ ಕ್ಲಬ್ ಸದಸ್ಯರಾದ ಶಂಭುಗೌಡ, ಪುಟ್ಟೇಗೌಡ, ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ ಹಾಗೂ ಗರ್ಭಿಣಿಯರು ಉಪಸ್ಥಿತರಿದ್ದರು.

# ‘ಪುಟ್ಟಗೂಡಿನ ಪಟ್ಟದರಸಿ’ ನೈಜ ಬದುಕಿನ ಪ್ರತಿಬಿಂಬ

• ಪ್ರಜೋದಯ ವರದಿ

**ಹಾಸನ:** ಕೊಟ್ರೇಶ್ ಎಸ್. ಉಪ್ಪಾರ್ ಅವರ ''ಪುಟ್ಟಗೂಡಿನ ಪಟ್ಟದರಸಿ'' ಕಾದಂಬರಿ ನೈಜಬದುಕಿನ ಪ್ರತಿಬಿಂಬವಾಗಿದೆ. ಮಾನವೀಯ ಮೌಲ್ಯಗಳನ್ನು ಅರಹುವಲ್ಲಿ ಕಾದಂಬರಿ ಮಹತ್ತರ ಪಾತ್ರ ವಹಿಸುತ್ತದೆ ಎಂದು ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಯ ಹಾಸನ ಜಿಲ್ಲಾ ಕಾರ್ಯದರ್ಶಿ ಪ್ರತಿಭಾ ಸುದರ್ಶನ್ ಅಭಿಪ್ರಾಯಪಟ್ಟರು.




ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಹಾಸನ ತಾಲ್ಲೂಕು ಘಟಕ ಕವಯಿತ್ರಿ ಪದ್ಮಾವತಿ ವೆಂಕಟೇಶ್ ಅವರ ಪ್ರಾಯೋಜಕತ್ವದಲ್ಲಿ ಹಮ್ಮಿಕೊಂಡಿದ್ದ 43ನೇ ಸಾಹಿತ್ಯ ಪಯಣ ಹೆಜ್ಜೆ ಕಾರ್ಯಕ್ರಮದಲ್ಲಿ ಸಾಹಿತಿ ಕೊಟ್ರೇಶ್ ಎಸ್.ಉಪ್ಪಾರ್ ಅವರ ''ಪುಟ್ಟಗೂಡಿನ ಪಟ್ಟದರಸಿ'' ಕಾದಂಬರಿ ಕುರಿತು ಮಾತನಾಡಿ, ಬದುಕನ್ನು ಹೀಗೆ ಬದುಕಬೇಕು ಎಂದು ಬೆಟ್ಟದಷ್ಟು ಆಸೆ ಹೊತ್ತ ಬಡತನದ ರೇಖೆಯ ಒಂದು ಕುಟುಂಬದ ಹೆಣ್ಣುಮಗಳಾದ ಕಮಲಿಯ ಕಥೆ. ತಂದೆ ತಾಯಿಯ ಮುದ್ದಿನ ಕೂಸಾದವಳು, ಶಾಲೆಯ ಎಲ್ಲ ಶಿಕ್ಷಕರ ನೆಚ್ಚಿನ ವಿದ್ಯಾರ್ಥಿಯಾಗಿ, ಸ್ನೇಹಿತರ ಉತ್ತಮ ಸಹಪಾಠಿಯಾಗಿ, ಮನೆಗೆ, ಶಾಲೆಗೆ, ಊರಿಗೆ ಹೆಸರನ್ನು ತಂದವಳ ಕಥೆ, ಆರಂಭದಲ್ಲಿ ಮನೆಯ ಶಾಲೆಯ ಜೊತೆ ಅವಳ ಒಡನಾಟವನ್ನು, ಅವಳ ಸಾಧನೆಯನ್ನು ಚಿತ್ರಿಸಿರುವ ಪರಿ, ನನ್ನನ್ನೇ ನಾನು 25ವರ್ಷಗಳ ಹಿಂದೆ ಕಂಡಂತಾಗಿ ಮನಸ್ಸು ಭಾವೋದ್ವೇಗಕ್ಕೆ ಒಳಗಾಗಿದ್ದಂತೂ ಸತ್ಯ. ಆಟ, ಪಾಠ, ಕಲೆ, ಭಾಷಣ, ಬರವಣಿಗೆಯ ಜೊತೆ ನಾನು ಅವಳಂತೆ ಸ್ಕೌಟ್ಸ್ ಗೈಡ್ಸ್ ಬದಲಾಗಿ, ಎನ್.ಸಿ.ಸಿ. ಕೆಡೆಟ್ ಆಗಿ ಎಲ್ಲರೊಳಗಿದ್ದು ವಿಭಿನ್ನವಾದ ಪ್ರತಿಭೆ ಹೊಂದಿದ್ದ ಕಾಲವನ್ನು ಈ ಕೃತಿ ಮೇಲುಕು ಹಾಕುವಂತೆ ಮಾಡಿದೆ ಎಂದರು.

ಹಾಸನ ಜಿಲ್ಲಾ ಕಸಾಪ ಮಾಜಿ ಗೌರವಾಧ್ಯಕ್ಷ ರವಿ ನಾಕಲಗೂಡು ಮಾತನಾಡಿ, ಕೊಟ್ರೇಶ್ ಎಸ್. ಉಪ್ಪಾರ್ ಅವರು ಸಾಹಿತ್ಯಿಕವಾಗಿ ಹಾಗೂ ಸಂಘಟನಾತ್ಮಕವಾಗಿ ರಾಜ್ಯದಾದ್ಯಂತ ಸಂಚಲನ ಮೂಡಿಸಿದ್ದಾರೆ. ತಾವು ಬೆಳೆಯುವುದಲ್ಲದೇ ಅನೇಕ ಯುವ ಪ್ರತಿಭೆಗಳನ್ನು ಬೆಳೆಸುತ್ತಿದ್ದಾರೆ. ಅವರಿಗೆ ಕನ್ನಡ ಸಾರಸ್ವತ ಕ್ಷೇತ್ರದಲ್ಲಿ ಉಜ್ವಲ ಭವಿಷ್ಯವಿದೆ ಎಂದರು.

ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಜಿಲ್ಲಾಧ್ಯಕ್ಷ ವಾಸು ಸಮುದ್ರವಳ್ಳಿ ಮಾತನಾಡಿ, ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಅನೇಕ ಹೊಸ ಬರಹಗಾರರ 'ನ್ನು ಬೆಳಕಿಗೆ ತಂದಿರುವಲ್ಲದೇ ಎಲೆಮರೆ ಕಾಯಿಯಂತಹ ಸಾಧಕರನ್ನು ಗುರುತಿಸಿ ಮುನ್ನೆಲೆಗೆ ತರುವಲ್ಲಿ ಕಳೆದ ಏಳೆಂಟು ವರ್ಷಗಳಿಂದ ಸತತವಾಗಿ ಕಾರ್ಯ ನಿರ್ವಹಿಸುತ್ತಿದೆ. ಜಾತ್ಯಾತೀತವಾಗಿ, ಧರ್ಮಾತೀತವಾಗಿ ಹಾಗೂ ಪಾರದರ್ಶಕವಾಗಿ ನಮ್ಮ ವೇದಿಕೆ ಕಾರ್ಯ ನಿರ್ವಹಿಸುತ್ತಿದೆ ಎಂದರು.

ತಾಲ್ಲೂಕು ಅಧ್ಯಕ್ಷೆ ಕೆ.ಸಿ.ಗೀತಾ ರಂಗಭೂಮಿ ಹಾಗೂ ಚಲನಚಿತ್ರ ಕಲಾವಿದೆ ಪೂಜಾ ರಘುನಂದನ್, ಜಿಲ್ಲಾ ಲೇಖಕಿಯರ ಬಳಗದ ಅಧ್ಯಕ್ಷೆ ರಾಜೇಶ್ವರಿ ಹುಲ್ಲೇನಹಳ್ಳಿ, ವೆಂಕಟೇಶ್, ಸುರೇಶ್ ಪಿಡಬ್ಲ್ಯೂಡಿ, ಜಿಲ್ಲಾ ಸಹ ಕಾರ್ಯದರ್ಶಿ ರಶ್ಮಿ, ಜಿಲ್ಲಾ ನಿರ್ದೇಶಕಿ ರೂಪಾ, ಸ್ವಾಮಿಗೌಡ ಸೇರಿದಂತೆ ಹಲವರು ಹಾಜರಿದ್ದರು.

ಕರ್ನಾಟಕ ಸರ್ಕಾರ

# ಭೂ ಗ್ಯಾರಂಟಿಯ ಭದ್ರತೆ

## ಜನಪರ ಆಡಳಿತವೇ ಆದ್ಯತೆ






ಗ್ಯಾರಂಟಿ ಸರ್ಕಾರ

- ರಾಜ್ಯದೆಲ್ಲೆಡೆ **'ಬಿ' ಖಾತಾದಿಂದ 'ಎ' ಖಾತಾ** ಪರಿವರ್ತನೆಗೆ ಕ್ರಮ
- **2,500 ಚದರ ಅಡಿ**ವರೆಗಿನ ನೂತನ ವಸತಿ ಕಟ್ಟಡಗಳ ಶಾಶ್ವತ **ವಿದ್ಯುತ್ ಸಂಪರ್ಕಕ್ಕೆ ಒಸಿ ವಿನಾಯಿತಿ**
- ಒಂದು ವರ್ಷದಲ್ಲಿ **1 ಕೋಟಿ ಕುಟುಂಬಗಳಿಗೆ ಇ-ಖಾತಾ ಹಂಚಿಕೆ**ಗೆ ನಿರ್ಣಯ
- ಕೇಂದ್ರ ಅರಣ್ಯ ಇಲಾಖೆಯಲ್ಲಿ ಬಾಕಿ ಇರುವ ರಾಜ್ಯದ ಎಲ್ಲಾ ಅರಣ್ಯ ಅನುಮತಿ ಪ್ರಕರಣಗಳ ಇತ್ಯರ್ಥ
- ಗಣಿಗಾರಿಕೆ ಸೇರಿ ವಿವಿಧ ಚಟುವಟಿಕೆಗಳಿಗೆ ಪಡೆದು ಬಳಸದೆ ಬಿಟ್ಟಿದ್ದ ಸರ್ಕಾರಿ ಜಾಗಗಳ ಸದ್ಬಳಕೆಗೆ ಕ್ರಮ
- ಬಡವರಿಗೆ ಬರೀ ನಿವೇಶನ ನೀಡುವ ಬದಲು ವಾಸಯೋಗ್ಯ ಮನೆಗಳನ್ನು ನಿರ್ಮಿಸಲು ತೀರ್ಮಾನ

---

ಶಕ್ತಿ ಅನ್ನಭಾಗ್ಯ ಗೃಹ ಜ್ಯೋತಿ ಗೃಹಲಕ್ಷ್ಮಿ ಯುವನಿಧಿ

CMofKarnataka https://dipr.karnataka.gov.in/

"ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"
-ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

ಕರ್ನಾಟಕ ವಾರ್ತೆ

CMYK CMYK CMYK CMYK

## ಹೆದ್ದಾರಿ ಬಿಟ್ಟು 100 ಮೀಟರ್ ದೂರ ಹಾರಿದ ಕಾರು



• ಪ್ರಜೋದಯ ವರದಿ

**ಆಲೂರು:** ಚಾಲಕನ ನಿಯಂತ್ರಣ ತಪ್ಪಿ ಕಾರು ಹೆದ್ದಾರಿಯಿಂದ ಸುಮಾರು 100 ಮೀಟರ್ ದೂರ ಹಾರಿ ಸಂಪೂರ್ಣ ಜಖಂಗೊಂಡಿರುವ ಘಟನೆ ತಾಲ್ಲೂಕಿನ ತಿಮ್ಮನಹಳ್ಳಿ ಸಮೀಪ ಸೋಮವಾರ ನಡೆದಿದೆ.

ಹಾಸನದ ದಿಕ್ಷಿತ್ ಎಂಬುವವರಿಗೆ ಸೇರಿದ ಕೆಎ13ಎಂ4925 ನಂಬರ್‌ನ ಕಾರು ನುಜ್ಜುಗುಜ್ಜಾಗಿದೆ. ಕಾಲೇಜು ವ್ಯಾಸಂಗ ಮಾಡುತ್ತಿರುವ ನಾಲ್ವರು ಯುವಕರು ಕಾರಿನಲ್ಲಿದ್ದರು ಎನ್ನಲಾಗಿದೆ. ಘಟನೆಯಲ್ಲಿ ಇಬ್ಬರಿಗೆ ಗಂಭೀರ ಗಾಯಗಳಾಗಿದ್ದು, ಹಿಮ್ಸ್‌ಗೆ ದಾಖಲಿಸಲಾಗಿದೆ. ಡಿಕ್ಕಿ ರಭಸಕ್ಕೆ ಜಮೀನಿನಲ್ಲಿದ್ದ ವಿದ್ಯುತ್ ಪರಿವರ್ತಕ ಮುರಿದು ಹೋಗಿದ್ದು, ಪ್ರಾಣಾಪಾಯ ಸಂಭವಿಸಿಲ್ಲ.

ದಿಕ್ಷಿತ್ ಅವರು ಪತ್ರಿಕೆಯೊಂದಿಗೆ ಮಾತನಾಡಿ, ನನ್ನ ತಮ್ಮನ ಸ್ನೇಹಿತರು ಬೆಳಿಗ್ಗೆ ಕಾರು ತೆಗೆದುಕೊಂಡು ಹೋಗಿದ್ದರು. ಎಲ್ಲಿಗೆ ಹೋಗಿದ್ದರೆಂಬುದು ಗೊತ್ತಿಲ್ಲ, ಆಲೂರಿನಿಂದ ಹಾಸನಕ್ಕೆ ಬರುವಾಗ ಅಪಘಾತ ಸಂಭವಿಸಿದೆ. ಜೋರು ಮಳೆ ಇದ್ದ ಹಿನ್ನೆಲೆಯಲ್ಲಿ ನಿಯಂತ್ರಣಕ್ಕೆ ಸಿಗದೆ ಅನಾಹುತವಾಗಿದೆ ಎಂದರು.

**ನಿರ್ಲಕ್ಷ್ಯದ ಚಾಲನೆಯೇ ಕಾರಣ**

ಸೋಮವಾರ ಮಧ್ಯಾಹ್ನ ವ್ಯಾಪ್ತಿಯಲ್ಲಿ ಜೋರು ಮಳೆ ಸುರಿಯುತ್ತಿದ್ದರೂ ಯುವಕ 180ರ ವೇಗದಲ್ಲಿ ಕಾರು ಓಡಿಸುತ್ತಿದ್ದ ಎಂದು ತಿಳಿದು ಬಂದಿದೆ. ವೇಗ ನಿಯಂತ್ರಣದಲ್ಲಿ ಇದ್ದಿದ್ದರೆ ದೊಡ್ಡ ಪ್ರಮಾಣದ ಹಾನಿಯಾಗುತ್ತಿರಲಿಲ್ಲವೆಂದು ಪ್ರತ್ಯಕ್ಷದರ್ಶಿಗಳು ಹೇಳಿದರು. ಪೊಲೀಸರು ಪರಿಶೀಲಿಸಿದ್ದು, ಪ್ರಕರಣ ದಾಖಲಾಗಿಲ್ಲ.

# ತಿಂಗಳಾಂತ್ಯಕ್ಕೆ ಕೇಂದ್ರಕ್ಕೆ ಬರ ಅಧ್ಯಯನ ವರದಿ

• ಪ್ರಜೋದಯ ವರದಿ

**ಬೆಂಗಳೂರು:** ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಸವಿವರ ಬರ ಅಧ್ಯಯನ ನಡೆಸಿದ್ದು ತಿಂಗಳಾಂತ್ಯಕ್ಕೆ ಕೇಂದ್ರ ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದೆಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರು ಹೇಳಿದರು.

ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕಿನ ಕಿಲಾರ ಹಳ್ಳಿಯಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬರ ಪರಿಸ್ಥಿತಿಯನ್ನು ಕೇಂದ್ರದ ಗಮನಕ್ಕೆ ತಂದು ಅಗತ್ಯ ಪರಿಹಾರ ಮಂಜೂರು ಮಾಡಲು ಒತ್ತಾಯಿಸಲಾಗುವುದು ಎಂದರು.

ಜಾನುವಾರುಗಳ ಮೇವಿಗೆ ಕೊರತೆಯಾಗದಂತೆ ಪ್ರತಿ ತಾಲ್ಲೂಕಿಗೆ 10 ಸಾವಿರ ಕ್ವಿಂಟಾಲ್ ಮೇವಿನ ಬೀಜ ವಿತರಿಸಲಾಗುತ್ತಿದೆ. ನೀರಿನ ಲಭ್ಯತೆ ಇರುವ ರೈತರು ಮೇವು ಬೆಳೆಯುತ್ತಾರೆ. ಹೆಚ್ಚಿನ ಮೇವು ಬೆಳೆದ ರೈತರಿಂದ ಖರೀದಿಸಲಾಗುವುದು. ಜಾನುವಾರುಗಳನ್ನು ಉಳಿಸಿಕೊಳ್ಳ ಬೇಕಿದೆ. ಈ ನಿಟ್ಟಿನಲ್ಲಿ ಸರ್ಕಾರ ಅನೇಕ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ಎಂದು ಹೇಳಿದರು.

ರಾಜ್ಯದಲ್ಲಿ ಮಳೆಯ ಪ್ರಮಾಣ ತೀವ್ರ ಕಡಿಮೆಯಾಗಿದೆ. ರೈತರು ಕಂಗಾಲಾಗಿದ್ದಾರೆ. ಪಾವಗಡ ತಾಲ್ಲೂಕಿನಲ್ಲಿ 19 ಸಾವಿರ ಹೆ. ಪ್ರದೇಶದಲ್ಲಿ ಶೇಂಗಾ ಬಿತ್ತನೆ ಮಾಡಬೇಕಿತ್ತು. ಆದರೆ, 4 ಸಾವಿರ ಹೆ.ನಲ್ಲಿ ಬಿತ್ತನೆಯಾಗಿದೆ. ಬಿತ್ತನೆಯಾಗಿರುವ ಬೆಳೆಯು ಮಳೆಯ ಕೊರತೆಯಿಂದ ಒಣಗುತ್ತಿದೆ. ಪಾವಗಡ ತಾಲ್ಲೂಕಿನಲ್ಲಿ ಶೇಂಗಾ ಬೆಳೆ ಸಂಪೂರ್ಣ ನಾಶವಾಗುತ್ತಿದೆಯೆಂದರು.



ಅತ್ಯಂತ ಕಠಿಣ ಪರಿಸ್ಥಿತಿಯ ಸಂದರ್ಭದಲ್ಲಿ ಸರ್ಕಾರ ಕೈಕಟ್ಟಿ ಕೂರಲು ಆಗುವುದಿಲ್ಲ, ಜನರ ಕಷ್ಟಕ್ಕೆ ಸ್ಪಂದಿಸುವುದು ನಮ್ಮ ಆದ್ಯ ಕರ್ತವ್ಯ. ಜನರ ಕುಡಿಯುವ ನೀರಿಗೆ ತಾಪತ್ರಯ ಆಗದಂತೆ 5 ಕೋ. ರೂ. ನೀಡಲಾಗಿದೆ. ಕುಡಿಯುವ ನೀರಿಗಾಗಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 1 ಕೋ. ರೂ. ನೀಡಲಾಗಿದೆ. ಸನ್ನಿವೇಶ ಬಹಳ ಗಂಭೀರವಾಗಿದೆ. ನೀರನ್ನು ಮಿತವಾಗಿ ಬಳಸಬೇಕು. ಹಿಂಗಾರು ಮಳೆಯ ಬಗ್ಗೆ ನಿರೀಕ್ಷೆ ಮಾಡುತ್ತಿದ್ದೇವೆ. ಇಡೀ ದೇಶದಲ್ಲಿ ಬರದ ಪರಿಸ್ಥಿತಿ ಇದೆ. ನಿಮ್ಮ ಸಹಕಾರ ಸರ್ಕಾರಕ್ಕೆ ಅಗತ್ಯ. ಎಲ್ಲಾ ರೀತಿಯ ನೆರವಿಗೆ ನಿಮ್ಮೊಂದಿಗೆ ನಿಲ್ಲಲಾಗುವುದೆಂದರು.

ತುಂಗಭದ್ರಾ ಜಲಾಶಯದ ಹಿನ್ನೀರಿನಿಂದ ಪಾವಗಡ ತಾಲ್ಲೂಕಿಗೆ ಕುಡಿಯುವ ನೀರು ಯೋಜನೆ ಮಾಡಲಾಗಿದೆ. ಕಳೆದ ವರ್ಷ ಯೋಜನೆಗೆ ಚಾಲನೆ ನೀಡಲಾಗಿದೆ. ಈ ಯೋಜನೆ ಇಲ್ಲವಾಗಿದ್ದರೆ ಪಾವಗಡ ತಾಲ್ಲೂಕಿನಲ್ಲಿ ಕುಡಿಯುವ ನೀರಿಗೆ ತೀವ್ರ ಸಮಸ್ಯೆಯಾಗುತ್ತಿತ್ತು. ನಿಮ್ಮ ಅದೃಷ್ಟಕ್ಕೆ ಈ ವರ್ಷ ತುಂಗಭದ್ರ ಜಲಾಶಯ ಭರ್ತಿಯಾಗುತ್ತಿದೆ. ಪಾವಗಡ ತಾಲ್ಲೂಕಿಗೆ ಕುಡಿಯುವ ನೀರು ಸಿಗುತ್ತದೆ. ಯಾವುದೇ ರೀತಿಯ ಸಮಸ್ಯೆಯಾಗುವುದಿಲ್ಲವೆಂದು ಪರಮೇಶ್ವರ್ ಅವರು ವಿಶ್ವಾಸ ವ್ಯಕ್ತಪಡಿಸಿದರು.

## ನಿಖಿಲ್ ರಾಜಕೀಯ ಭವಿಷ್ಯಕ್ಕೆ ಪಾದಯಾತ್ರೆ: ಸಿಎಂ

• ಪ್ರಜೋದಯ ವರದಿ



**ಬೆಂಗಳೂರು:** ಬಿಡದಿ ಟೌನ್‌ಶಿಪ್ ವಿರೋಧಿಸಿ ಬಿಜೆಪಿ- ಜೆಡಿಎಸ್ ಮಾಡುತ್ತಿರುವ ಪಾದ ಯಾತ್ರೆಯಲ್ಲಿ ಯಾವ ರೈತರೂ ಇಲ್ಲ, ತಮ್ಮ ಮನೆಯ ಹುಡುಗನ (ನಿಖಿಲ್ ಕುಮಾರಸ್ವಾಮಿ) ರಾಜಕೀಯ ಭವಿಷ್ಯಕ್ಕಾಗಿ ಮಾಡುತ್ತಿರುವ ಹೋರಾಟ ಇದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು.

ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೇರೆ ಕ್ಷೇತ್ರದಲ್ಲಿರುವ ಪಕ್ಷದ ಕಾರ್ಯಕರ್ತರನ್ನು ಕರೆದುಕೊಂಡು ಬಂದು ಪಾದಯಾತ್ರೆ ಕೈಗೊಂಡಿದ್ದಾರೆ. ಹೋರಾಟ ಮತ್ತು ಪ್ರತಿಭಟನೆ ಪ್ರಜಾಪ್ರಭುತ್ವದಲ್ಲಿ ಅವರಿಗಿರುವ ಹಕ್ಕು. ಅದನ್ನು ನಾನು ಬೇಡ ಎನ್ನುವುದಿಲ್ಲ. ಅವರು ಮಾಡಿದ ಯೋಜನೆ ನಾವು ಮುಂದುವರೆಸಿದ್ದೇವೆ. ಅವರು 25 ಲಕ್ಷ ಪರಿಹಾರ ನೀಡುತ್ತೇವೆ ಎಂದಿದ್ದರು. ನಾವು 2.50 ಕೋಟಿಯಿಂದ 3 ಕೋಟಿ ರೂ.ವರೆಗೂ ಪರಿಹಾರ ನೀಡುತ್ತಿದ್ದೇವೆ ಎಂದು ವಿವರಿಸಿದರು.

ನೈಸ್ ಮತ್ತು ಬಿಡದಿ ಯೋಜನೆ ಒಂದೇ ರೀತಿಯ ಯೋಜನೆ ಎಂಬ ಕುಮಾರಸ್ವಾಮಿ ಅವರ ಆರೋಪಕ್ಕೆ ಪ್ರತಿಕ್ರಿಯಿಸಿ, ಅವರೆಡೂ ಯೋಜನೆಗಳಿಗೆ ಅವರೇ ಸಹಿ ಹಾಕಿದ್ದು ಅವರೇ. ನೈಸ್ ಯೋಜನೆ ಮಾಡಿದವರು ಯಾರು ಅವರೇ ಮಾಡಿದ್ದು. ಆದರೆ, ಅದರಿಂದ ಒಳ್ಳೆಯದಾಗಿದೆ. ರಸ್ತೆ ಆಗಿರುವುದರಿಂದ ಬೆಂಗಳೂರು ಇವತ್ತು ಉಳಿದುಕೊಂಡಿದೆ.ಅವರು ಮಾಡಿದ್ದು ತಪ್ಪು ಎಂದಿಲ್ಲ, ಆದರೆ, ಅದರಲ್ಲಿ ಅವರ ಸ್ವಾರ್ಥವಿದೆ. ಅದನ್ನೆಲ್ಲಾ ಸಮಯ ಬಂದಾಗ ಮಾತನಾಡುವೆ ಎಂದು ಪ್ರತಿಕ್ರಿಯಿಸಿದರು.

**ಶೀಘ್ರದಲ್ಲೇ ಖಾತೆ ಹಂಚಿಕೆ**

ಸಚಿವರಿಗೆ ಖಾತೆ ಹಂಚಿಕೆಬಗ್ಗೆ ಪ್ರತಿಕ್ರಿಯಿಸಿ, ಖಾತೆ ಹಂಚಿಕೆ ಬಗ್ಗೆ ಶನಿವಾರ ಸಂಜೆ ದೆಹಲಿಯಲ್ಲಿ ವರಿಷ್ಠರೊಂದಿಗೆ ಚರ್ಚೆ ಮಾಡಿ ಬಂದಿದ್ದೇನೆ. ಶೀಘ್ರದಲ್ಲೇ ಖಾತೆ ಹಂಚಿಕೆ ಮಾಡಲಾಗುವುದು ಎಂದು ತಿಳಿಸಿದರು.

## ವಿದೇಶಿ ತಳಿಗಳ ಕಾಫಿ ಸಸಿ ಖರೀದಿಸದಿರಿ

» ಮೊದಲನೇ ಪುಟದಿಂದ

ದಾರಿ ಮಾಡಿಕೊಟ್ಟಂತಾಗುತ್ತದೆ ಎಂದು ಎಚ್ಚರಿಸಿದ್ದಾರೆ.

ಎಲ್ಲಾ ರೀತಿಯ ಸಸಿಗಳ ಆಮದು ಮತ್ತು ಪರಿಚಯಕ್ಕೆ ಸಂಬಂಧಿಸಿದಂತೆ ಭಾರತ ಸರ್ಕಾರವು ಕಡ್ಡಾಯ ನಿಯಮಾವಳಿಗಳನ್ನು ರೂಪಿಸಿದೆ. ಈ ಕಾರ್ಯವಿಧಾನಗಳು ಸಸ್ಯ ತಪಾಸಣಾ ನಿಯಮಗಳ ಪಾಲನೆಯನ್ನು ಖಚಿತ ಪಡಿಸಿಕೊಳ್ಳಲು ಮತ್ತು ತೋಟದ ಪರಿಸರ ವ್ಯವಸ್ಥೆಯನ್ನು ಆಕ್ರಮಣಕಾರಿ ಕೀಟಗಳು, ರೋಗಗಳು ಹಾಗೂ ಕಳೆಗಳಿಂದ ರಕ್ಷಿಸಲು ಉದ್ದೇಶಿಸಲಾಗಿದೆ ಎಂದು ತಿಳಿಸಿದ್ದಾರೆ.

ಕಾಫಿ ಬೆಳೆಯುವ ದೇಶಗಳಿಂದ ವಿದೇಶಿ ಕಾಫಿ ತಳಿಗಳನ್ನು ಆಮದು ಮಾಡಿಕೊಳ್ಳಲು ಯಾವುದೇ ಖಾಸಗಿ ನರ್ಸರಿಗಳು ಅಥವಾ ತೋಟಗಳಿಗೆ ಕಾಫಿ ಮಂಡಳಿಯು ಅನುಮತಿ ಅಥವಾ ಮಾನ್ಯತೆ ನೀಡಿಲ್ಲ. ಪರಿಣಾಮವಾಗಿ, ಇಂತಹ ಅನಧಿಕೃತ ಸಸಿಗಳ ಖರೀದಿ ಮತ್ತು ಕೃಷಿಯು ಇಡೀ ಕಾಫಿ ವಲಯಕ್ಕೆ ಹಾನಿಕಾರಕವಾಗಬಹುದು. ಅಲ್ಲದೆ, ಭಾರತದ ಕೃಷಿ-ಹವಾಮಾನ ಪರಿಸ್ಥಿತಿಗಳಲ್ಲಿ ಈ ಆಮದು ಮಾಡಿಕೊಂಡ ತಳಿಗಳ ಕಾರ್ಯಕ್ಷಮತೆಯನ್ನು ಕಾಫಿ ಮಂಡಳಿಯು ವೈಜ್ಞಾನಿಕವಾಗಿ ಪರಿಶೀಲಿಸಿಲ್ಲ ಎಂದು ತಿಳಿಸಿದ್ದಾರೆ.

ಎಲ್ಲಾ ಕಾಫಿ ಬೆಳೆಗಾರರ ಸಂಘಗಳು, ತೋಟದ ಮಾಲೀಕರು ಯಾವುದೇ ಖರೀದಿ ನಿರ್ಧಾರಗಳನ್ನು ತೆಗೆದುಕೊಳ್ಳುವ ಮೊದಲು, ಅಂತಹ ಹೇಳಿಕೆಗಳ ಸತ್ಯಾಸತ್ಯತೆಯನ್ನು ಕಾಫಿ ಮಂಡಳಿಯ ವಿಜ್ಞಾನಿಗಳೊಂದಿಗೆ ಪರಿಶೀಲಿಸಬೇಕು. ವಿದೇಶಿ ಕಾಫಿ ಸಸಿಗಳಿಗೆ ಸಂಬಂಧಿಸಿದ ಪ್ರಚಾರದ ಹೇಳಿಕೆಗಳ ವಿಷಯದಲ್ಲಿ ಎಚ್ಚರಿಕೆ ವಹಿಸಬೇಕು ಎಂದು ರೈತರಿಗೆ ಸಲಹೆ ನೀಡಿದ್ದಾರೆ.

# ಕಸ್ತೂರಿ ರಂಗನ್ ವರದಿಗೆ ಬೆಳೆಗಾರರ ಒಕ್ಕೂಟ ವಿರೋಧ

## ರೈತರು, ಕಾಫಿ ಬೆಳೆಗಾರರು, ಸ್ಥಳೀಯರ ಹಿತಾಸಕ್ತಿಗೆ ಧಕ್ಕೆ : ಹಳಸೆ ಶಿವಣ್ಣ

• ಪ್ರಜೋದಯ ವರದಿ

**ಹಾಸನ:** ಪಶ್ಚಿಮಘಟ್ಟ ಸಂರಕ್ಷಣೆ ಹೆಸರಿನಲ್ಲಿ ರೈತರು, ಕಾಫಿ ಬೆಳೆಗಾರರು ಹಾಗು ಸ್ಥಳೀಯ ಜನರ ಹಿತಾಸಕ್ತಿಗೆ ಧಕ್ಕೆ ತರುವ ಕಸ್ತೂರಿ ರಂಗನ್ ವರದಿಯಲ್ಲಿರುವ ಯಾವುದೇ ಕ್ರಮಗಳನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲವೆಂದು ಕರ್ನಾಟಕ ಬೆಳೆಗಾರರ ಒಕ್ಕೂಟ ಅಧ್ಯಕ್ಷ ಹಳಸೆ ಶಿವಣ್ಣ ಅವರು ತಿಳಿಸಿದರು.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಶ್ಚಿಮಘಟ್ಟ ಪ್ರದೇಶವನ್ನು ಪರಿಸರ ಸೂಕ್ಷ್ಮ ವಲಯವೆಂದು ಘೋಷಿಸುವ ಸಂಬಂಧ ಕೇಂದ್ರ ಸರ್ಕಾರ ಮರು ಬಿಡುಗಡೆ ಮಾಡಿರುವ ಕಸ್ತೂರಿರಂಗನ್ ವರದಿಯ 7ನೇ ಕರಡು ಅಧಿಸೂಚನೆಯಲ್ಲಿ ಹಿಂದಿನ ಅಂಶಗಳನ್ನೇ ಮುಂದುವರಿಸಲಾಗಿದೆ.ಇದರಿಂದ ಪಶ್ಚಿಮಘಟ್ಟದ 6 ರಾಜ್ಯಗಳ ರೈತರು ಮತ್ತು ಬೆಳೆಗಾರರಿಗೆ ಅನ್ಯಾಯವಾಗಲಿದೆ ಎಂದು ಆರೋಪಿಸಿದರು.

ಉಪಗ್ರಹ ಆಧಾರಿತ ಸಮೀಕ್ಷೆ ಮೂಲಕ ಹಸಿರು ಹೊದಿಕೆ, ದಟ್ಟ ಅರಣ್ಯ ಹಾಗು ಕಾಫಿ ತೋಟಗಳ ನಡುವಿನ ನಿಖರ ವ್ಯತ್ಯಾಸ ಗುರುತಿಸುವುದು ಕಷ್ಟ. ನೆರಳಿನ ಮರಗಳ ನಡುವೆ ಕಾಫಿ ಕೃಷಿ ನಡೆಯುತ್ತಿರುವುದರಿಂದ ಉಪಗ್ರಹ ಚಿತ್ರಗಳಲ್ಲಿ ಮಾನವ ನಿರ್ವಹಿತ ಕೃಷಿ ಭೂಮಿ ಹಾಗೂ ನೈಸರ್ಗಿಕ ಅರಣ್ಯ ಪ್ರದೇಶಗಳ ನಡುವಿನ ವ್ಯತ್ಯಾಸ ಸ್ಪಷ್ಟವಾಗಿ ಗೋಚರಿಸು ವುದಿಲ್ಲ. ಆದ್ದರಿಂದ ಉಪಗ್ರಹ ಚಿತ್ರಗಳನ್ನೇ ಆಧಾರವಾಗಿಸದೆ ಸ್ಥಳೀಯ ಮಟ್ಟದಲ್ಲಿ ಭೌತಿಕ ಸಮೀಕ್ಷೆ ನಡೆಸಿ ಭೂಮಿಯ ವಿಸ್ತೀರ್ಣ, ಭೂ ಬಳಕೆ ಹಾಗೂ ಭೌಗೋಳಿಕ ಲಕ್ಷಣಗಳನ್ನು ನಿಖರವಾಗಿ ಪರಿಶೀಲಿಸಬೇಕೆಂದು ಒತ್ತಾಯಿಸಿದರು.




ಕೇಂದ್ರ ಹಾಗು ರಾಜ್ಯ ಸರ್ಕಾರಗಳ ಮೇಲೆ ವಿವಿಧ ಸಂಘಟನೆಗಳು ತಮ್ಮ ಅಭಿಪ್ರಾಯ, ಸಲಹೆ ಮತ್ತು ಆಕ್ಷೇಪಣೆ ಸಲ್ಲಿಸಿದ್ದರೂ, ಅವುಗಳನ್ನು ಸಮರ್ಪಕವಾಗಿ ಪರಿಗಣಿಸದೆ ವರದಿ ರೂಪಿಸಲಾಗಿದೆ. ಮುಖ್ಯವಾಗಿ ಸ್ಥಳೀಯ ಜನರ ಅಭಿಪ್ರಾಯ ಪಡೆಯದೆ ಇಂತಹ ಮಹತ್ವದ ವರದಿ ಸಿದ್ಧಪಡಿಸಿರುವುದು ಸ್ವಾಭಾವಿಕ ನ್ಯಾಯದ ತತ್ವಕ್ಕೆ ವಿರುದ್ಧವಾಗಿದೆ ಎಂದು ಹೇಳಿದರು.

ಡಾ.ಕಸ್ತೂರಿರಂಗನ್ ನೇತೃತ್ವದ ಸಮಿತಿಯು ವರದಿ ಸಿದ್ಧಪಡಿಸುವ ಸಂದರ್ಭದಲ್ಲಿ ಪಶ್ಚಿಮ ಘಟ್ಟ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾಫಿ ಬೋರ್ಡ್, ಟೀ ಬೋರ್ಡ್ ಹಾಗು ರಬ್ಬರ್ ಬೋರ್ಡ್‌ಗಳ ಅಭಿಪ್ರಾಯವನ್ನೂ ಸಮರ್ಪಕ ವಾಗಿ ಪಡೆಯಲಿಲ್ಲ. ಈ ಪ್ರದೇಶದ ಕೃಷಿಕರು, ಬೆಳೆಗಾರರು ಹಾಗು ಮೂಲನಿವಾಸಿಗಳ ಅಭಿಪ್ರಾಯಗಳನ್ನು ಸಂಗ್ರಹಿಸದೇ ಸಿದ್ಧಪಡಿಸಿರುವ ವರದಿ ವಾಸ್ತವ ಪರಿಸ್ಥಿತಿಗೆ ವಿರುದ್ಧವಾಗಿದೆ ಎಂದು ದೂರಿದರು.

ಈಗಾಗಲೇ ಕೇರಳ ಸರ್ಕಾರ ವರದಿ ವಿರೋಧಿಸಿದೆ. ನಮ್ಮಲ್ಲೂ ಆ ಕೆಲಸ ಆಗಬೇಕು. ಅದಕ್ಕಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ಮೇಲೆ ಒತ್ತಡ ಹೇರಲಾಗುವುದು. ವರದಿ ಜಾರಿಗೂ ಮುನ್ನ ವ್ಯಾಪಕ ಚರ್ಚೆ ನಡೆಸಬೇಕು. ನಾವು ಪಶ್ಚಿಮಘಟ್ಟ ಸಂರಕ್ಷಣೆ ಉದ್ದೇಶ ವಿರೋಧಿಸುವುದಿಲ್ಲ. ಆದರೆ, ವರದಿ ಹೆಸರಿನಲ್ಲಿ ರೈತರು, ಬೆಳೆಗಾರರು ಮತ್ತು ಜನ ಸಾಮಾನ್ಯರ ಜೀವನೋಪಾಯ ಹಾಗು ಅಭಿವೃದ್ಧಿಗೆ ಧಕ್ಕೆ ತರುವ ಕ್ರಮ ಒಪ್ಪಲು ಸಾಧ್ಯವಿಲ್ಲ. ಹೀಗಾಗಿ ಸ್ಥಳೀಯ ಜನರ ಅಭಿಪ್ರಾಯ ಪಡೆದು, ವಾಸ್ತವ ಪರಿಸ್ಥಿತಿ ಆಧರಿಸಿ ವರದಿ ಪರಿಷ್ಕರಿಸಬೇಕೆಂದು ಆಗ್ರಹಿಸಿದರು.

ಪ್ರಧಾನ ಕಾರ್ಯದರ್ಶಿ ಟಿ.ಪಿ.ಸುರೇಂದ್ರ, ಗೌರವ ಕಾರ್ಯದರ್ಶಿ ಹೆಗ್ಗೋವೆ ಮಟ್ಟರಾಜು, ಮಂಜುನಾಥ್ ಶೆಟ್ಟಿ, ಸಂಘಟನಾ ಕಾರ್ಯದರ್ಶಿ ಪುಟ್ಟಸ್ವಾಮಿ, ಸಚಿನ್ ಇದ್ದರು.

## ಕ್ರಮ ವಹಿಸದಿದ್ದರೆ ರಾಜ್ಯಾದ್ಯಂತ ಹೋರಾಟ: ಸಿಐಟಿಯು

# ಕನಿಷ್ಠ ವೇತನ ಅಧಿಸೂಚನೆ ತಕ್ಷಣ ಜಾರಿಗೊಳಿಸಿ

• ಪ್ರಜೋದಯ ವರದಿ

**ಹಾಸನ:** ರಾಜ್ಯ ಸರ್ಕಾರ ಕಾರ್ಮಿಕರಿಗೆ ನಿಗದಿಪಡಿಸಿರುವ ಕನಿಷ್ಠ ವೇತನ ಅಧಿಸೂಚನೆಯನ್ನು ತಕ್ಷಣವೇ ಜಾರಿಗೊಳಿಸದಿದ್ದರೆ ರಾಜ್ಯಾದ್ಯಂತ ಹೋರಾಟ ನಡೆಸಲಾಗುವುದೆಂದು ಸಿಐಟಿಯು ಜಿಲ್ಲಾಧ್ಯಕ್ಷ ಧರ್ಮೇಶ್ ಅವರು ತಿಳಿಸಿದರು.

ನಗರದ ಮಹವೀರ ವೃತ್ತದಲ್ಲಿ ಸಿಐಟಿಯು, ಕೆಪಿಆರ್‌ಎಸ್ ಹಾಗು ಡಿಹೆಚ್‌ಎಸ್ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಜನಾಕ್ರೋಶ ಸಭೆಯಲ್ಲಿ ಮಾತನಾಡಿದ ಅವರು, ಕಾರ್ಮಿಕ ಸಂಘಟನೆಗಳ ಸುದೀರ್ಘ ಹೋರಾಟದ ಫಲವಾಗಿ ಮೇ 22ರಂದು ಸರ್ಕಾರ ಕನಿಷ್ಠ ವೇತನದ ಅಧಿಸೂಚನೆ ಹೊರಡಿಸಿದ್ದರೂ, ಖಾಸಗಿ ಮಾಲೀಕರ ಒತ್ತಡಕ್ಕೆ ಮಣಿದು ಅದನ್ನು ಮೌಖಿಕವಾಗಿ ತಡೆ ಹಿಡಿಯಲಾಗಿದೆ. ಗ್ರಾಮ ಪಂಚಾಯಿತಿ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಹಾಗು ಗುತ್ತಿಗೆ ಕಾರ್ಮಿಕರಿಗೆ ಹಲವು ತಿಂಗಳುಗಳಿಂದ ವೇತನ ಬಿಡುಗಡೆ ಮಾಡದೆ ಆಡಳಿತ ಯಂತ್ರ ನಿರ್ಲಕ್ಷ್ಯ ವಹಿಸಿದೆ ಎಂದು ದೂರಿದರು.




ಕನಿಷ್ಠ ವೇತನ ಕಸಿದುಕೊಳ್ಳುತ್ತಿರುವ ಸರ್ಕಾರದಕ್ರಮವನ್ನು ವಿರೋಧಿಸಿ ರಾಜ್ಯದ ಪ್ರತಿಯೊಬ್ಬ ಕಾರ್ಮಿಕರೂ ಇಲಾಖೆಗೆ ಸಾಮೂಹಿಕವಾಗಿ ಕ್ಲೈಮ್ ಅರ್ಜಿ ಸಲ್ಲಿಸಬೇಕು. ಗ್ರಾಮ ಪಂಚಾಯಿತಿ ನೌಕರರ ಬಾಕಿ ವೇತನವನ್ನು ತಕ್ಷಣ ಬಿಡುಗಡೆ ಮಾಡಲು ಒತ್ತಾಯಿಸಿ ಆ.18 ರಂದು ರಾಜ್ಯಾದ್ಯಂತ ಏಕಕಾಲಕ್ಕೆ ಎಲ್ಲಾ ಜಿಲ್ಲಾ ಪಂಚಾಯಿತಿ ಕಚೇರಿ ಮುತ್ತಿಗೆ ಹಾಕಲಾಗುವುದು. ಸರ್ಕಾರದ ವಿಳಂಬ ನೀತಿ ಖಂಡಿಸಿ ಸೆ.8 ರಂದು ಬೆಂಗಳೂರು ಚಲೋ ಚಳುವಳಿ ನಡೆಸಲಾಗುವುದೆಂದು ತಿಳಿಸಿದರು.

ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ಬಿ.ಪುಷ್ಪ, ಖಜಾಂಚಿ ಅರವಿಂದ, ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾ ಅಧ್ಯಕ್ಷ ಹೆಚ್.ಎಸ್. ಮಂಜುನಾಥ್, ಪ್ರಧಾನ ಕಾರ್ಯದರ್ಶಿ ಹೆಚ್. ಆರ್.ನವೀನ್ ಕುಮಾರ್, ಡಿಹೆಚ್‌ಎಸ್ ಜಿಲ್ಲಾ ಸಂಚಾಲಕರಾದ ಎಂ.ಜಿ.ಪೃಥ್ವಿ, ಹೊನ್ನೇಗೌಡ, ಚಂದ್ರೇಗೌಡ, ನಂದೀಶ್, ಕುಮಾರಸ್ವಾಮಿ, ಚಂದ್ರಹಾಸ್, ಬಿಟಿಯೂಟ ನೌಕರರ ಸಂಘಟನೆಯ ಉಷಾ ಇದ್ದರು.

## ಅಪರಿಚಿತ ವಾಹನ ಡಿಕ್ಕಿ: ವ್ಯಕ್ತಿ ಸಾವು

• ಪ್ರಜೋದಯ ವರದಿ

**ಅರಸೀಕೆರೆ:** ಅಪರಿಚಿತ ವಾಹನ ಡಿಕ್ಕಿಯಾಗಿ ಗಂಭೀರ ಗಾಯಗೊಂಡಿದ್ದ ವ್ಯಕ್ತಿ ಚಿಕಿತ್ಸೆ ಫಲಿಸದೆ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಬೆಳ್ಳುವಳ್ಳಿ ತಾಂಡ್ಯ ಸಮೀಪ ನಡೆದಿದೆ. ಜಾವಗಲ್-ಬಾಣಾವರ ಮುಖ್ಯ ರಸ್ತೆಯ ಎಡ ಬದಿಯಲ್ಲಿ ರಸ್ತೆಬದಿ ಮಲಗಿದ್ದ ವ್ಯಕ್ತಿಯನ್ನು ಗಮನಿಸಿದ ಸಾರ್ವಜನಿಕರು ಪೊಲೀಸರಿಗೆ ಮಾಹಿತಿ ನೀಡಿದರು. ಗಾಯಾಳು ವ್ಯಕ್ತಿಯನ್ನು ಆ್ಯಂಬುಲೆನ್ಸ್ ಮೂಲಕ ತಕ್ಷಣ ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಿಸದೆ ಮೃತ ಪಟ್ಟಿದ್ದಾರೆ. ವ್ಯಕ್ತಿಯ ಗುರುತು ಪತ್ತೆಯಾಗಿಲ್ಲ. ಜಾವಗಲ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ರಾಜ್ಯಮಟ್ಟದ ಅಥ್ಲೆಟಿಕ್ಸ್ ಸ್ಪರ್ಧೆ: 36 ಕ್ರೀಡಾಪಟುಗಳ ಆಯ್ಕೆ

• ಪ್ರಜೋದಯ ವರದಿ

**ಹಾಸನ:** ಜಿಲ್ಲಾ ಅಮೆಚೂರ್ ಅಥ್ಲೆಟಿಕ್ ಸಂಸ್ಥೆ ವತಿಯಿಂದ ಜಿಲ್ಲಾ ಸಿಂಥೆಟಿಕ್ ಕ್ರೀಡಾಂಗಣ ದಲ್ಲಿ ನಡೆದ ಜಿಲ್ಲಾ ಮಟ್ಟದ ಕಿರಿಯರ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಉತ್ತಮ ಪ್ರದರ್ಶನ ನೀಡಿದ 36 ಕ್ರೀಡಾಪಟುಗಳು ರಾಜ್ಯಮಟ್ಟದ ಕಿರಿಯರ ಅಥ್ಲೆಟಿಕ್ಸ್ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಕಿರಿಯರ ವಿವಿಧ ವಿಭಾಗಗಳ ಬಾಲಕ ಮತ್ತು ಬಾಲಕಿಯರು ಸೇರಿ ಒಟ್ಟು 170 ಕ್ರೀಡಾಪಟುಗಳು ಭಾಗವಹಿಸಿದ್ದರು. ವಿವಿಧ ಸ್ಪರ್ಧೆಗಳಲ್ಲಿ ಪ್ರಥಮ ಹಾಗು ದ್ವಿತೀಯ ಸ್ಥಾನ ಗಳಿಸಿದ ಕ್ರೀಡಾಪಟುಗಳ ಪೈಕಿ 36 ಮಂದಿಯನ್ನು ರಾಜ್ಯ ತಂಡಕ್ಕೆ ಆಯ್ಕೆ ಮಾಡಲಾಗಿದೆ.

ಆ.11 ಮತ್ತು 12ರಂದು ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ಕರ್ನಾಟಕ ಅಥ್ಲೆಟಿಕ್ಸ್ ಸಂಸ್ಥೆ ವತಿಯಿಂದ ನಡೆಯಲಿರುವ ಕರ್ನಾಟಕ ಕಿರಿಯರ ಅಥ್ಲೆಟಿಕ್ಸ್ ಕ್ರೀಡಾ ಕೂಟದಲ್ಲಿ ಜಿಲ್ಲೆಯನ್ನು ಪ್ರತಿನಿಧಿಸಲಿದ್ದಾರೆ. ರಾಜ್ಯಮಟ್ಟದ ಕ್ರೀಡಾಕೂಟದಲ್ಲಿ ಪ್ರಥಮ ಹಾಗು ದ್ವಿತೀಯ ಸ್ಥಾನ ಗಳಿಸುವ ಕ್ರೀಡಾಪಟುಗಳು ದಕ್ಷಿಣ ವಲಯ ಹಾಗು ರಾಷ್ಟ್ರೀಯ ಕಿರಿಯರ ಅಥ್ಲೆಟಿಕ್ಸ್ ಕ್ರೀಡಾಕೂಟಕ್ಕೆ ನೇರವಾಗಿ ಆಯ್ಕೆಯಾಗಲಿದ್ದಾರೆ.




ಜಿಲ್ಲಾ ತಂಡಕ್ಕೆ ಆಯ್ಕೆಯಾದ ಕ್ರೀಡಾಪಟುಗಳಿಗೆಜಿಲ್ಲಾ ಅಮೆಚೂರ್ ಅಥ್ಲೆಟಿಕ್ ಸಂಸ್ಥೆಯ ಕಾರ್ಯಾಧ್ಯಕ್ಷ ಮಹೇಂದ್ರ ಕುಮಾರ್, ಗೌರವ ಕಾರ್ಯದರ್ಶಿ ಪ್ರಸನ್ನ ಕುಮಾರ್, ಶ್ರೀ ತೇಜ ಫೌಂಡೇಶನ್ ಸಂಸ್ಥಾಪಕ ಪ್ರಣವ್, ಶಿಕ್ಷಕರಾದ ಪಾಲಾಕ್ಷ ಹಾಗು ಕೃಷ್ಣ ಅವರ ಸಮ್ಮುಖದಲ್ಲಿ ಸಮವಸ್ತ್ರ ವಿತರಿಸಲಾಯಿತು.

ರಾಜ್ಯಮಟ್ಟದ ಕ್ರೀಡಾಕೂಟದಲ್ಲಿ ಜಿಲ್ಲೆಯ ಎಲ್ಲಾ ಕ್ರೀಡಾಪಟುಗಳು ಉತ್ತಮ ಪ್ರದರ್ಶನ ನೀಡಿ ಪದಕ ಗಳಿಸುವ ಮೂಲಕ ಜಿಲ್ಲೆಗೆ ಕೀರ್ತಿ ತರಲಿ ಎಂದು ಸಂಸ್ಥೆಯ ಪದಾಧಿಕಾರಿಗಳು, ಕ್ರೀಡಾಭಿಮಾನಿಗಳು ಶುಭ ಹಾರೈಸಿದರು. ಜಿಲ್ಲಾ ತಂಡವು ಸೋಮವಾರ ಬೆಂಗಳೂರಿಗೆ ಪ್ರಯಾಣ ಬೆಳೆಸಿತು.

ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷೆ ಎಂ.ಕೆ.ಆಶಾ, ಉಪಾಧ್ಯಕ್ಷ ಡಾ.ವಸಂತ್ ಕುಮಾರ್ ಮತ್ತು ಬಾಲರಾಜು, ಖಜಾಂಚಿ ನವೀನ್ ಕುಮಾರ್, ಸಹಾಯಕ ಕಾರ್ಯದರ್ಶಿ ರಕ್ಷಿತ್ ಸೇರಿ ಸಂಸ್ಥೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಹೊರ ಗುತ್ತಿಗೆ ನೌಕರರ ಹಿತಕಾಯಲು ಒತ್ತಾಯ

• ಪ್ರಜೋದಯ ವರದಿ

**ಹಾಸನ:** ವಿವಿಧ ಸರ್ಕಾರಿ ಇಲಾಖೆ, ನಿಗಮ-ಮಂಡಳಿ ಹಾಗು ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ 4.5 ಲಕ್ಷ ಹೊರ ಗುತ್ತಿಗೆ ನೌಕರರ ಹಿತದೃಷ್ಟಿಯಿಂದ ಕನಿಷ್ಠ ವೇತನ ಪರಿಷ್ಕರಣೆ ಅಧಿಸೂಚನೆಯನ್ನು ಕಡ್ಡಾಯವಾಗಿ ಜಾರಿಗೊಳಿಸುವಂತೆ ಆಗ್ರಹಿಸಿ ಸರ್ಕಾರಿ ಹೊರಗುತ್ತಿಗೆ ನೌಕರರ ಸಂಘದಿಂದ ಸೋಮವಾರ ಪ್ರತಿಭಟನೆ ನಡೆಸಲಾಯಿತು.

ಸರ್ಕಾರಿ ಹೊರಗುತ್ತಿಗೆ ನೌಕರರ ಸಂಘದ ಜಿಲ್ಲಾಧ್ಯಕ್ಷ ರಂಗನಾಥ್ ಅವರು ಮಾತನಾಡಿ, ಅಗತ್ಯ ವಸ್ತುಗಳ ಬೆಲೆ ಏರಿಕೆ ಹಾಗು ಜೀವನ ವೆಚ್ಚ ಹೆಚ್ಚಾಗಿರುವ ಹಿನ್ನಲೆ ಹೊರಗುತ್ತಿಗೆ ನೌಕರರಿಗೆ ಪ್ರಸ್ತುತ ನೀಡುತ್ತಿರುವ ವೇತನ ಜೀವನ ನಿರ್ವಹಣೆಗೆ ಸಾಲುತ್ತಿಲ್ಲ. ಹೀಗಾಗಿ ಕನಿಷ್ಠ ವೇತನ ಪರಿಷ್ಕರಣೆ ಪ್ರಕ್ರಿಯೆಯನ್ನು ವಿಳಂಬ ಮಾಡಬಾರದು. ಅನೇಕ ಕಡೆಗಳಲ್ಲಿ ಗುತ್ತಿಗೆ ಮತ್ತು ಹೊರಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ಎಲ್ಲಾ ಅರ್ಹ ನೌಕರರಿಗೂ ಪರಿಷ್ಕೃತ ಕನಿಷ್ಠ ವೇತನ ಅನ್ವಯವಾಗುವಂತೆ ಸರ್ಕಾರ ಸ್ಪಷ್ಟ ಆದೇಶ ಹೊರಡಿಸಬೇಕೆಂದು ಒತ್ತಾಯಿಸಿದರು.



ಕನಿಷ್ಠ ವೇತನ ಜೊತೆಗೆ ಕಾನೂನು ಬದ್ಧವಾಗಿ ಅನ್ವಯಿಸುವ ಇತರೆ ಸೌಲಭ್ಯಗಳು ಹಾಗು ಭತ್ಯೆಗಳನ್ನು ನೌಕರರಿಗೆ ಸಮರ್ಪಕವಾಗಿ ನೀಡುವಂತೆ ಖಾತ್ರಿಪಡಿಸಬೇಕು. ಜಿಲ್ಲಾ ಮಟ್ಟದಲ್ಲಿ ಅಧಿಕಾರಿಗಳನ್ನು ನೇಮಿಸಿ, ವಿವಿಧ ಸರ್ಕಾರಿ ಸಂಸ್ಥೆಗಳಲ್ಲಿ ಕನಿಷ್ಠ ವೇತನ ಸಮರ್ಪಕವಾಗಿ ಜಾರಿಯಾಗುತ್ತಿದೆಯೇ ಎಂಬುದನ್ನು ನಿಯಮಿತವಾಗಿ ಪರಿಶೀಲಿಸಬೇಕು. ಈಗಾಗಲೇ ಆರಂಭಿಸಿರುವ ಕನಿಷ್ಠ ವೇತನ ಪರಿಷ್ಕರಣೆ ಪ್ರಕ್ರಿಯೆಯನ್ನು ಮತ್ತಷ್ಟು ವಿಳಂಬಗೊಳಿಸದೆ, ಕರಡು ಆದೇಶ ದೃಢೀಕರಿಸಿ ಅಂತಿಮ ಅಧಿಸೂಚನೆ ಹೊರಡಿಸಬೇಕು. ಪರಿಷ್ಕೃತ ಕನಿಷ್ಠ ವೇತನವನ್ನು ತಕ್ಷಣದಿಂದಲೇ ಪರಿಣಾಮಕಾರಿಯಾಗಿ ಜಾರಿಗೆ ತಂದು ಹೊರಗುತ್ತಿಗೆ ನೌಕರರ ಹಿತ ಕಾಪಾಡಬೇಕೆಂದು ಆಗ್ರಹಿಸಿದರು.

ಸರ್ಕಾರಿ ಹೊರಗುತ್ತಿಗೆ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಪ್ರಕಾಶ್, ಹಿರಿಯ ದಲಿತ ಮುಖಂಡ ಕೃಷ್ಣದಾಸ್, ಹೆಚ್.ಕೆ.ಸಂದೇಶ್, ಹುಡಾ ಮಾಜಿ ಅಧ್ಯಕ್ಷ ಕೃಷ್ಣಕುಮಾರ್, ರಂಗಸ್ವಾಮಿ ಗುಡ್ಡೇನಹಳ್ಳಿ ಇದ್ದರು.

## ಅರಣ್ಯ ಭೂಮಿ ಅಕ್ರಮ ಹಂಚಿಕೆ ಗುರುತಿಸಲು ವಿಫಲ

» ಮೊದಲನೇ ಪುಟದಿಂದ

ಸಮರ್ಪಕವಾಗಿ ಅನುಷ್ಠಾನಗೊಳಿಸದಿದ್ದರೆ ಎಸ್‌ಐಟಿ ರಚನೆಯ ಉದ್ದೇಶವೇ ವಿಫಲವಾಗಲಿದೆ ಎಂದು ಹೇಳಿದರು.

ಪ್ರತಿ ಗ್ರಾಮದ ಭೂಮಿಯನ್ನು ಜಿಪಿಎಸ್ ಆಧಾರಿತ ವೈಜ್ಞಾನಿಕ ಸಮೀಕ್ಷೆಗೆ ಒಳಪಡಿಸಿ, ಕಂದಾಯ ಮತ್ತು ಅರಣ್ಯ ಇಲಾಖೆಯ ದಾಖಲೆಗಳೊಂದಿಗೆ ತಾಳೆ ಮಾಡಬೇಕು. ರೈತರು ಯಾವ ಪ್ರಮಾಣದ ಭೂಮಿಯನ್ನು ಹೊಂದಿದ್ದಾರೆ, ಯಾವ ರೀತಿಯಲ್ಲಿ ಬಳಕೆ ಮಾಡುತ್ತಿದ್ದಾರೆಂಬುದನ್ನು ವೈಜ್ಞಾನಿಕವಾಗಿ ಗುರುತಿಸಬೇಕು. ಇದರಿಂದ ನೈಜ ಫಲಾನುಭವಿಗಳು ಹಾಗೂ ಅಕ್ರಮ ಒತ್ತುವರಿದಾರರನ್ನು ಪ್ರತ್ಯೇಕಿಸಲು ಸಾಧ್ಯವಾಗಲಿದೆ ಎಂದರು.

ಸೆಕ್ಷನ್-4 ವ್ಯಾಪ್ತಿಯಲ್ಲಿರುವ ಗ್ರಾಮಗಳಲ್ಲಿ ಗ್ರಾಮವಾರು ವಿಚಾರಣೆ ನಡೆಸಿ, ದಾಖಲೆಗಳನ್ನು ಪರಿಶೀಲಿಸಲು ತಜ್ಞರನ್ನು ಒಳಗೊಂಡ ವ್ಯವಸ್ಥೆ ರೂಪಿಸಬೇಕು. ರೈತರ ಹಿತ ಮತ್ತು ಅರಣ್ಯ ಸಂರಕ್ಷಣೆ ಎರಡನ್ನೂ ಗಮನದಲ್ಲಿಟ್ಟುಕೊಂಡು ಪಾರದರ್ಶಕವಾಗಿ ಪರಿಶೀಲನೆ ನಡೆಸಬೇಕೆಂದು ಆಗ್ರಹಿಸಿದರು.

## ಆ.13 ರಂದು ಸಂಗೀತ ಸಂಜೆ ಕಾರ್ಯಕ್ರಮ

• ಪ್ರಜೋದಯ ವರದಿ

**ಹಾಸನ:** ವಿಶ್ವಪಥ ಚಾರಿಟಬಲ್ ಟ್ರಸ್ಟ್ ವತಿಯಿಂದ ಅಕ್ಷರ ಬುಕ್ ಹೌಸ್ ಸಹಯೋಗದಲ್ಲಿ ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಆ.13 ರಂದು ಸಂಜೆ 7 ಗಂಟೆಗೆ ಶ್ರಾವಣ ಬಂತು ಹೆಸರಿನ ವಿಶೇಷ ಸಂಗೀತ ಸಂಜೆ ಕಾರ್ಯಕ್ರಮ ಆಯೋಜಿಸ ಲಾಗಿದೆ ಎಂದು ನಿರ್ದೇಶಕ ಯದೀಶ್ ಅವರು ತಿಳಿಸಿದರು.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ನಾಡಿನ ಸುಪ್ರಸಿದ್ಧ ಗಾಯಕರ ತಂಡ ಸಂಗೀತ ಪ್ರಿಯ ರನ್ನು ರಂಜಿಸಲಿದೆ. ರವಿ ಮೂರೂರು, ಸವಿತಾ ಗಣೇಶ್, ಭಾಗ್ಯಶ್ರೀ ಗೌಡ, ಕಡಬಗೆರೆ ಮುನಿರಾಜ್, ಮೆಲ್ವಿನ್ ಲೀಮಾ, ಆತ್ಮಾರಾಮ್ ನಾಯಕ್, ಪ್ರದೀಪ್ ಕಿಗ್ಗಲ್ ಹಾಗು ವಿನಯ್ ರಂಗಧೋಳ್ ಸೇರಿ ಹಲವು ಖ್ಯಾತ ಗಾಯಕರು ಆಗಮಿಸಲಿದ್ದಾರೆಂದು ಹೇಳಿದರು.

ಶ್ರಾವಣ ಮಾಸದ ಸಂಭ್ರಮಕ್ಕೆ ಸಂಗೀತದ ಸೊಬಗು ಬೆರೆಸುವ ನಿಟ್ಟಿನಲ್ಲಿ ಕಾರ್ಯಕ್ರಮ ರೂಪಿಸಲಾಗಿದ್ದು, ವಿವಿಧ ಪ್ರಕಾರದ ಜನಪ್ರಿಯ ಗೀತೆಗಳು ಹಾಗೂ ಸಂಗೀತ ಕಾರ್ಯ ಕ್ರಮ ಪ್ರೇಕ್ಷಕರನ್ನು ರಂಜಿಸಲಿವೆ. ಸಂಗೀತಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿ ಗೊಳಿಸುವಂತೆ ಅವರು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಅಕ್ಷರ ಅಕಾಡೆಮಿ ಸಂಸ್ಥಾಪಕ ಬಿ.ಕೆ.ಗಂಗಾಧರ್, ಪತ್ರಕರ್ತ ರವಿನಾಕಲ ಗೂಡು, ಜಿಲ್ಲಾ ಒಕ್ಕಲಿಗರ ವೇದಿಕೆಯ ರಾಜೇಶ್‌ಗೌಡ ಇದ್ದರು.

## ಕರಾಟೆ ಸ್ಪರ್ಧೆ: ಸಿದ್ಧಾರ್ಥ್‌ಗೆ ಬಹುಮಾನ

• ಪ್ರಜೋದಯ ವರದಿ



ಚನ್ನರಾಯಪಟ್ಟಣ: ಕೆ.ಆರ್. ಪೇಟೆಯಲ್ಲಿ ಇತ್ತೀಚೆಗೆ ನಡೆದ ರಾಜ್ಯ ಮಟ್ಟದ ಕಾವೇರಿ ಓಪನ್ ಕರಾಟೆ ಚಾಂಪಿಯನ್ ಶಿಪ್ 2026ರ ಸ್ಪರ್ಧೆ ಯಲ್ಲಿ ಪಟ್ಟಣದ ಶ್ರೀ ವಿವೇಕಾನಂದ ಅಂತಾರಾಷ್ಟ್ರೀಯ ಶಾಲೆಯ 7ನೇ ತರಗತಿ ವಿದ್ಯಾರ್ಥಿ ಸಿದ್ಧಾರ್ಥ್ ಎಂ.ಚಕ್ರವರ್ತಿ ದ್ವಿತೀಯ ಸ್ಥಾನ ಪಡೆದಿದ್ದಾರೆ.

ಮಾಲತೇಶ್ ಅವರು ತರಬೇತಿ ನೀಡಿದ್ದರು. ವಿದ್ಯಾರ್ಥಿಯು ಪತ್ರಕರ್ತ ಐ.ಕೆ.ಮಂಜುನಾಥ ಮತ್ತು ಎ.ವೈ.ಸರಿತಾ ಅವರ ಪುತ್ರ. ವಿದ್ಯಾರ್ಥಿಯ ಸಾಧನೆಗೆ ಶಾಲೆಯ ಪ್ರಾಂಶುಪಾಲರು ಹಾಗು ಆಡಳಿತ ಮಂಡಳಿ ಶುಭ ಹಾರೈಸಿದೆ.

## ನೆನಪುಗಳ ಮೆಲುಕು ಹಾಕಲು ಫೋಟೋ ಅತ್ಯವಶ್ಯ | ಶಾಸಕ ಸಿಮೆಂಟ್ ಮಂಜು

# ಛಾಯಾಗ್ರಾಹಕರು ಕಾಲಕ್ಕೆ ತಕ್ಕಂತೆ ಬದಲಾಗಬೇಕು

• ಪ್ರಜೋದಯ ವರದಿ

**ಆಲೂರು:** ತಂತ್ರಜ್ಞಾನ ದಿನದಿಂದ ದಿನಕ್ಕೆ ವೇಗವಾಗಿ ಬದಲಾಗುತ್ತಿರುವ ಸಂದರ್ಭದಲ್ಲಿ ಛಾಯಾಗ್ರಾಹಕರು ಕೂಡ ಕಾಲಕ್ಕೆ ತಕ್ಕಂತೆ ಹೊಸ ತಂತ್ರಜ್ಞಾನ ಅಳವಡಿಸಿಕೊಂಡು ವೃತ್ತಿಯಲ್ಲಿ ಹೊಸತನ ಕಂಡುಕೊಳ್ಳಬೇಕು. ಇಲ್ಲದಿದ್ದರೆ ಸ್ಪರ್ಧಾತ್ಮಕ ಯುಗದಲ್ಲಿ ಹಿಂದೆ ಬೀಳುವ ಪರಿಸ್ಥಿತಿ ಎದುರಾಗುತ್ತದೆ ಎಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.

ಪಟ್ಟಣದ ವೀರಶೈವ ಕಲ್ಯಾಣ ಮಂಟಪದಲ್ಲಿ ಮಲೆನಾಡು ಛಾಯಾಗ್ರಾಹಕರ ಸಂಘದಿಂದ ಆಯೋಜಿಸಿದ್ದ ಸಹ ಕುಟುಂಬ ಸಮ್ಮಿಲನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಯಾವುದೇ ಕ್ಷೇತ್ರದಲ್ಲಿ ಸಂಘಟಿತರಾಗಿ ಮುನ್ನಡೆದಾಗ ಮಾತ್ರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಹಾಗು ಬೇಡಿಕೆಗಳನ್ನು ಈಡೇರಿಸಿಕೊಳ್ಳಲು ಸಾಧ್ಯ. ಛಾಯಾಗ್ರಾಹಕರು ಕೂಡ ಸಂಘ ಟನೆಯ ಶಕ್ತಿಯನ್ನು ಬಳಸಿಕೊಂಡು ವೃತ್ತಿಯ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕೆಂದು ಸಲಹೆ ನೀಡಿದರು.

ಹಿಂದಿನ ಕಾಲದ ಛಾಯಾಗ್ರಹಣಕ್ಕೂ ಇಂದಿನ ಛಾಯಾಗ್ರಹಣಕ್ಕೂ ಸಾಕಷ್ಟು ವ್ಯತ್ಯಾಸವಿದೆ. ಹಿಂದೆ ಒಂದು ಊರಿಗೆ ಒಂದೆರಡು ಸ್ಟುಡಿಯೋಗಳಿರುತ್ತಿದ್ದವು. ಮದುವೆ, ಶುಭ ಸಮಾರಂಭ ಸೇರಿ ವಿಶೇಷ ಸಂದರ್ಭಗಳಲ್ಲಿ ಮಾತ್ರ ಕ್ಯಾಮರಾ ಬಳಕೆಯಾಗುತ್ತಿತ್ತು. ಆದರೆ ಇಂದು ಪ್ರತಿ ಯೊಬ್ಬರ ಕೈಯಲ್ಲೂ ಮೊಬೈಲ್ ಕ್ಯಾಮರಾ ಲಭ್ಯವಿದ್ದು, ಸಾಮಾನ್ಯ ವ್ಯಕ್ತಿಯೂ ಗುಣಮಟ್ಟದ ಚಿತ್ರಗಳನ್ನು ಸೆರೆ ಹಿಡಿಯುವ ಹಾಗು ವಿವಿಧ ವಿನ್ಯಾಸಗಳನ್ನು ರೂಪಿಸುವ ಪರಿಸ್ಥಿತಿ ನಿರ್ಮಾಣ ವಾಗಿದೆ ಎಂದರು.



ಡಿಜಿಟಲ್ ಕ್ಯಾಮರಾ, ಆಧುನಿಕ ಎಡಿಟಿಂಗ್ ತಂತ್ರಜ್ಞಾನ, ಗ್ರಾಫಿಕ್ಸ್ ವಿನ್ಯಾಸ ಹಾಗು ಕೃತಕ ಬುದ್ಧಿಮತ್ತೆ (ಎಐ) ಸೇರಿ ಹಲವು ಹೊಸ ತಂತ್ರಜ್ಞಾನಗಳು ಛಾಯಾಗ್ರಹಣ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆ ತಂದಿವೆ. ಈ ಬದಲಾವಣೆಗಳಿಗೆ ಹೊಂದಿಕೊಳ್ಳುವ ಮೂಲಕ ಛಾಯಾಗ್ರಾಹಕರು ವೃತ್ತಿಪರ ಕೌಶಲವನ್ನು ಹೆಚ್ಚಿಸಿಕೊಳ್ಳಬೇಕು. ಆಗ ಮಾತ್ರ ಹೊಸ ತಲೆಮಾರಿನ ಗ್ರಾಹಕರ ಅಗತ್ಯಕ್ಕೆ ತಕ್ಕಂತೆ ಗುಣಮಟ್ಟದ ಸೇವೆ ನೀಡಲು ಸಾಧ್ಯವೆಂದರು.

**ಹಳೆಯ ಸ್ಟುಡಿಯೋಗಳು ಕಣ್ಮರೆ**

ಸಕಲೇಶಪುರ ಭಾಗದಲ್ಲಿ ಹಿಂದೆ ಹಲವು ಸ್ಟುಡಿಯೋಗಳು ಜನಪ್ರಿಯವಾಗಿದ್ದವು. ಆದರೆ ಕಾಲಕ್ರಮೇಣ ಅವುಗಳಲ್ಲಿ ಹಲವು ಕಣ್ಮರೆಯಾಗಿವೆ. ತಂತ್ರಜ್ಞಾನ ಬದಲಾವಣೆ ಹಾಗು ಗ್ರಾಹಕರ ನಿರೀಕ್ಷೆಗೆ ತಕ್ಕಂತೆ ಹೊಂದಿಕೊಳ್ಳದಿರುವುದು ಅದಕ್ಕೆ ಪ್ರಮುಖ ಕಾರಣ. ಛಾಯಾಗ್ರಾಹಕರು ಬದಲಾವಣೆಯನ್ನು ಸವಾಲಾಗಿ ಸ್ವೀಕರಿಸಿ ಹೊಸ ತಂತ್ರಜ್ಞಾನ ಕಲಿಯಬೇಕು. ವೃತ್ತಿಯಲ್ಲಿ ಹೊಸತನ ಅಳವಡಿಸಿಕೊಂಡು ಮುಂದಿನ ಪೀಳಿಗೆಗೂ ಈ ಕ್ಷೇತ್ರವನ್ನು ಕೊಂಡೊಯ್ಯಬೇಕೆಂದರು.

**ಛಾಯಾಚಿತ್ರ ಅಮೂಲ್ಯ ನೆನಪು**

ತಂತ್ರಜ್ಞಾನದ ಯುಗದಲ್ಲಿಯೂ ಛಾಯಾಗ್ರಾಹಕರ ವೃತ್ತಿಗೆ ತನ್ನದೇ ಆದ ಮಹತ್ವವಿದೆ. ಛಾಯಾಚಿತ್ರವೆಂದರೆ ಕೇವಲ ಒಂದು ಚಿತ್ರವಲ್ಲ. ಅದು ಮನುಷ್ಯನ ಜೀವನದ ಅಮೂಲ್ಯ ಕ್ಷಣಗಳನ್ನು ಶಾಶ್ವತವಾಗಿ ಉಳಿಸುವ ನೆನಪು. ಹಣ ಕೊಟ್ಟರೂ ಮರಳಿ ಪಡೆಯಲಾಗದ ಕ್ಷಣಗಳನ್ನು ಛಾಯಾಗ್ರಾಹಕರು ತಮ್ಮ ಕ್ಯಾಮರಾದಲ್ಲಿ ಸೆರೆಹಿಡಿದು ಮುಂದಿನ ಪೀಳಿಗೆಗೆ ಉಳಿಸುತ್ತಾರೆಂದರು.

ಮನೆಯಲ್ಲಿರುವ ಹಳೆಯ ಆಲ್ಬಂಗಳಲ್ಲಿನ ಛಾಯಾಚಿತ್ರಗಳು ಇಂದು ಅತ್ಯಂತ ಅಮೂಲ್ಯವಾಗಿವೆ. ಅವು ಕಳೆದುಹೋದರೆ ಎಷ್ಟೇ ಹಣ ಖರ್ಚು ಮಾಡಿದರೂ ಅದೇ ಕ್ಷಣವನ್ನು ಮತ್ತೆ ಸೃಷ್ಟಿಸಲು ಸಾಧ್ಯವಿಲ್ಲ. ನೂರು ವರ್ಷಗಳ ಹಿಂದೆ ನಮ್ಮ ಊರು ಹೇಗಿತ್ತು ಎಂಬುದನ್ನು ತಿಳಿದುಕೊಳ್ಳಲು ಹಳೆಯ ಛಾಯಾಚಿತ್ರಗಳೇ ಪ್ರಮುಖ ಸಾಕ್ಷಿಯಾಗಿವೆ. ಅದೇ ರೀತಿ 2025 ವರ್ಷಗಳ ಹಿಂದೆ ನಾವು ಹೇಗಿದ್ದೆವು ಎಂಬುದನ್ನು ನೆನಪಿಸಿಕೊಳ್ಳಲು ಕೂಡ ಛಾಯಾಚಿತ್ರಗಳು ನೆರವಾಗುತ್ತವೆ ಎಂದರು.

ಇದೇ ವೇಳೆ ಛಾಯಾಗ್ರಾಹಕರ ಸಂಘದ ವತಿಯಿಂದ ಸಂಘದ ಕಟ್ಟಡ ನಿರ್ಮಾಣಕ್ಕಾಗಿ ನಿವೇಶನ ಒದಗಿಸುವಂತೆ ಶಾಸಕ ಸಿಮೆಂಟ್ ಮಂಜು ಅವರಿಗೆ ಮನವಿ ಸಲ್ಲಿಸಲಾಯಿತು. ಶಾಸಕರು ಛಾಯಾಗ್ರಾಹಕರಿಗೆ ನೂತನ ಗುರುತಿನ ಚೀಟಿ ವಿತರಿಸಿದರು. ಎಸ್‌ಎಸ್‌ಎಲ್‌ಸಿ ಹಾಗು ಪಿಯುಸಿಯಲ್ಲಿ ಉತ್ತಮ ಅಂಕ ಗಳಿಸಿದ ಛಾಯಾಗ್ರಾಹಕರ ಮಕ್ಕಳನ್ನು ಅಭಿನಂದಿಸಲಾಯಿತು.

ಜಿಲ್ಲಾ ಛಾಯಾಗ್ರಾಹಕರ ಸಂಘದ ಅಧ್ಯಕ್ಷ ನಿಂಗರಾಜು, ಕೆಪಿಎ ನಿರ್ದೇಶಕ ಕೊನೆರಿ ಸೂರಿ, ಜಿಲ್ಲಾ ಛಾಯಾಗ್ರಾಹಕರ ಸಂಘದ ನಿರ್ದೇಶಕ ಹೇಮಚಂದ್ರ, ಆಲೂರು ತಾಲ್ಲೂಕು ಮಲೆನಾಡು ಛಾಯಾಗ್ರಾಹಕರ ಸಂಘದ ಅಧ್ಯಕ್ಷ ನೀಲೇಶ್, ಕಾರ್ಯದರ್ಶಿ ವಸಂತರಾಜು, ಖಜಾಂಚಿ ಮನುಕುಮಾರ್ ಮತ್ತಿತರರಿದ್ದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019